Volume : 9 | Issue : 130 | August : 04 : 2026 : Tuesday
ಸಂಪುಟ : 9 | ಸಂಚಿಕೆ : 130 | ಆಗಸ್ಟ್ : 04 : 2026 : ಮಂಗಳವಾರ
www.VIKRAMAVAHINI.com
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ



# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ || VIKRAMA VAHINI



ಬೆಂಗಳೂರು ನಗರದಲ್ಲಿ ಮೊದಲ ಬಾರಿಗೆ ವೈಟ್ ಟಾಪಿಂಗ್ ರಸ್ತೆಯಲ್ಲಿ ಫೈರ್ ಹೈಡ್ರೆಂಟ್ ಅಳವಡಿಸಲಾಗಿದ್ದು, ಅಗ್ನಿ ಅವಘಡದ ವೇಳೆ ತ್ವರಿತ ಬೆಂಕಿ ನಂದಿಸಲು ನೆರವಾಗಲಿದೆ ಎಂದು ಶಾಸಕ ದಿನೇಶ್ ಗುಂಡೂರಾವ್ ತಿಳಿಸಿದರು. ಪುಟ 2

ಪುಟ 4 ಅತಿವೃಷ್ಟಿ ಹಾಗೂ ಅನಾವೃಷ್ಟಿ ಪರಿಸ್ಥಿತಿಯನ್ನು ಪರಿಶೀಲಿಸಲು ನೂತನ ಸಚಿವರು ಬುಧವಾರದಿಂದ ತಮಗೆ ಜವಾಬ್ದಾರಿ ನೀಡಲಾದ ಜಿಲ್ಲೆಗಳಿಗೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿ ಕಂದಾಯ ಸಚಿವರಿಗೆ ವರದಿ ಸಲ್ಲಿಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೂಚನೆ ನೀಡಿದರು.

# ಗೊಂದಲ, ಆಕ್ರೋಶಗಳ ನಡುವೆ ಸಂಪುಟ ವಿಸ್ತರಣೆ 'ಗಜ ಪ್ರಸವ'ಕ್ಕೆ ತೆರೆ!

## ಹಲವು ಜಿಲ್ಲೆ–ಜಾತಿಗಳಿಗೆ ಇಲ್ಲ ಪ್ರಾತಿನಿಧ್ಯ: ರಾಜೀನಾಮೆ–ಪ್ರತಿಭಟನೆ!

## ಸಚಿವರ ಪಟ್ಟಿ ಜತೆಯೇ ಬಂತು ಸ್ಪೀಕರ್ ಹೆಸರು; ಕೆಟ್ಟ ಸಂಪ್ರದಾಯ– ಬಿಜೆಪಿ ಆಕ್ರೋಶ

## 'ಶಿವ ಸೈನ್ಯ' ಸಂಪುಟಕ್ಕೆ ಮುನ್ನುಡಿ; ಅಸಮಾಧಾನದ ಕಿಡಿ ಮಾತ್ರ ಇನ್ನೂ ಜೀವಂತ!

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದಲ್ಲಿ ಅಧಿಕಾರ ಹಂಚಿಕೆ ಸೂತ್ರದಂತೆ ಸಿದ್ದರಾಮಯ್ಯ ಅವರ ರಾಜೀನಾಮೆಯ ಬಳಿಕ ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿ ಎರಡು ತಿಂಗಳು ಕಳೆದ ನಂತರ ಕೊನೆಗೂ ಸಚಿವ ಸಂಪುಟ ವಿಸ್ತರಣೆ ನಡೆದಿದೆ. ಇದರೊಂದಿಗೆ ಬಹುತೇಕ ಪೂರ್ಣ ಪ್ರಮಾಣದ 'ಶಿವ ಸೈನ್ಯ' ಅಸ್ತಿತ್ವಕ್ಕೆ ಬಂದಂತಾಗಿದೆ. ಇನ್ನೂ 18 ತಿಂಗಳಲ್ಲೇ ವಿಧಾನಸಭೆ ಚುನಾವಣೆ ಎದುರಾಗಲಿರುವ ಹಿನ್ನೆಲೆಯಲ್ಲಿ, ಜಾತಿ–ಪ್ರಾದೇಶಿಕ ಸಮೀಕರಣ, ಹಿರಿಯ–ಕಿರಿಯರ ಸಮತೋಲನ ಹಾಗೂ ರಾಜಕೀಯ ಲೆಕ್ಕಾಚಾರಗಳನ್ನು ಅಳೆದು–ತೂಗಿ ಹೈಕಮಾಂಡ್ ಅಂತಿಮ ಪಟ್ಟಿಗೆ ಮುದ್ರೆ ಒತ್ತಿದೆ.

ಆದರೆ, ಸುದೀರ್ಘ ಸಮಾಲೋಚನೆ ಮತ್ತು ಹಲವು ಸುತ್ತಿನ ಚರ್ಚೆಗಳ ಬಳಿಕ 'ಗಜಪ್ರಸವ'ದಂತೆ ಸಂಪುಟ ವಿಸ್ತರಣೆ ನಡೆದರೂ ಅಸಮಾಧಾನದ ಹೊಗೆ ಇನ್ನೂ ಸಂಪೂರ್ಣ ತಣ್ಣಗಾಗಿಲ್ಲ. ಪದೇ ಪದೇ ಬದಲಾಗುತ್ತಿದ್ದ ಸಚಿವರ ಪಟ್ಟಿ, ಕೊನೆಯ ಕ್ಷಣದಲ್ಲಿ ಮಹಿಳಾ ಶಾಸಕಿಗೆ ಅವಕಾಶ ನಿರಾಕರಿಸಿದ ನಿರ್ಧಾರ, ಕೊನೆಯ ಘಳಿಗೆಯ ರಾಜಕೀಯ ಕಸರತ್ತುಗಳು ಕಾಂಗ್ರೆಸ್ ನಾಯಕತ್ವದ ಮೇಲೆ ಪ್ರಶ್ನೆಗಳನ್ನು ಎಬ್ಬಿಸಿವೆ.

ಸಚಿವ ಸ್ಥಾನ ಬಹುತೇಕ ಖಚಿತವೆಂದು ನಂಬಿದ್ದ ಕೆಲ ಶಾಸಕರಿಗೆ ಉಂಟಾದ ನಿರಾಸೆ ಪಕ್ಷದೊಳಗಿನ ಅಸಮಾಧಾನವನ್ನು ಮತ್ತಷ್ಟು ತೀವ್ರಗೊಳಿಸಿದೆ. ಇದೀಗ ಸಚಿವ ಸ್ಥಾನ ವಂಚಿತರಾದ ಕೆಲವು ಆಕಾಂಕ್ಷಿ ಶಾಸಕರು ಬಹಿರಂಗವಾಗಿಯೇ ರಾಜೀನಾಮೆಯ ಎಚ್ಚರಿಕೆ ನೀಡುತ್ತಿರುವುದು ಕಾಂಗ್ರೆಸ್ ಹೈಕಮಾಂಡ್‌ಗೆ ಹೊಸ ತಲೆನೋವಾಗಿ ಪರಿಣಮಿಸಿದೆ.

ಚುನಾವಣೆಗೆ ಮುನ್ನ ಪಕ್ಷದೊಳಗಿನ ಅಸಮಾಧಾನವನ್ನು ಶಮನಗೊಳಿಸಿ ಸಂಘಟನೆಯನ್ನು ಒಗ್ಗೂಡಿಸುವುದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಕಾಂಗ್ರೆಸ್ ನಾಯಕತ್ವದ ಮುಂದಿರುವ ಅತಿ ದೊಡ್ಡ ರಾಜಕೀಯ ಸವಾಲಾಗಿದೆ.

### ಬ್ರಾಹ್ಮಣ ಸಮುದಾಯಕ್ಕಿಲ್ಲ ಪ್ರಾತಿನಿಧ್ಯ

ವಿಸ್ತರಿತ ಸಂಪುಟದಲ್ಲಿ ಬ್ರಾಹ್ಮಣ ಸಮುದಾಯದ ಯಾವುದೇ ಶಾಸಕರು ಸಚಿವರಾಗಿಲ್ಲ. ಈ ಮೂಲಕ ಬ್ರಾಹ್ಮಣ ಸಮುದಾಯಕ್ಕೆ ಪ್ರಾತಿನಿಧ್ಯ ಇಲ್ಲದಂತಾಗಿದೆ.

ಈ ಹಿಂದೆ ಸಿದ್ದರಾಮಯ್ಯ ಅವಧಿಯಲ್ಲಿ ದಿನೇಶ್ ಗುಂಡೂರಾವ್ ಆರೋಗ್ಯ ಸಚಿವರಾಗಿದ್ದರು. ಈ ಬಾರಿ ಮೂವರು ಮುಸ್ಲಿಂರಿಗೆ ಸಚಿವ ಸ್ಥಾನ ಸಿಕ್ಕಿದ್ದು, ಈ ಸಮುದಾಯದ ಪ್ರಾತಿನಿಧ್ಯ ಏರಿಕೆಯಾಗಿದೆ. ಇದು ಹೊಸ ಸಂಪುಟದ ಗಮನಾರ್ಹ ಲಕ್ಷಣಗಳಲ್ಲಿ ಒಂದಾಗಿದೆ.

### 'ರಾಜೀನಾಮೆ ಕೊಟ್ಟರೆ ಅಂಗೀಕರಿಸಿ'!
## ಹೈಕಮಾಂಡ್ ಖಡಕ್

ಸಚಿವ ಸಂಪುಟ ವಿಸ್ತರಣೆ ಬಳಿಕ ಕಾಂಗ್ರೆಸ್‌ನಲ್ಲಿ ಅಸಮಾಧಾನ ಭುಗಿಲೆದ್ದಿರುವ ಬೆನ್ನಲ್ಲೇ, ರಾಜೀನಾಮೆಯ ಬೆದರಿಕೆ ಹಾಕುತ್ತಿರುವ ಶಾಸಕರ ವಿರುದ್ಧ ಕಾಂಗ್ರೆಸ್ ಹೈಕಮಾಂಡ್ ಕಠಿಣ ನಿಲುವು ತಳೆದಿದೆ. ಪಕ್ಷದ ಕೆಲ ಶಾಸಕರು ಬಹಿರಂಗವಾಗಿ ರಾಜೀನಾಮೆಯ ಎಚ್ಚರಿಕೆ ನೀಡಿರುವುದನ್ನು ಗಂಭೀರವಾಗಿ ಪರಿಗಣಿಸಿರುವ ವರಿಷ್ಠರು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ದೂರವಾಣಿ ಮೂಲಕ ಸಂಪರ್ಕಿಸಿ ಪರಿಸ್ಥಿತಿಯ ಕುರಿತು ವಿವರ ಪಡೆದಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಸಚಿವ ಸ್ಥಾನದಿಂದ ವಂಚಿತರಾದವರಿಗೆ ನಿಗಮ–ಮಂಡಳಿಗಳ ಅಧ್ಯಕ್ಷ ಸ್ಥಾನ ಸೇರಿದಂತೆ ಸೂಕ್ತ ರಾಜಕೀಯ ಅವಕಾಶ ಕಲ್ಪಿಸುವ ಕುರಿತು ಚರ್ಚೆ ನಡೆದಿದ್ದು, ಅದಕ್ಕೂ ಒಪ್ಪದವರು ರಾಜೀನಾಮೆ ಸಲ್ಲಿಸಿದರೆ ಅದನ್ನು ಅಂಗೀಕರಿಸುವಂತೆ ಹೈಕಮಾಂಡ್ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಸ್ಪಷ್ಟ ಸೂಚನೆ ನೀಡಿದೆ ಎನ್ನಲಾಗಿದೆ. ನೂತನ ಸಚಿವರ ಪ್ರಮಾಣವಚನಕ್ಕೂ ಮುನ್ನವೇ ಈ ಸಂದೇಶ ರವಾನೆಯಾಗಿರುವುದು ಕಾಂಗ್ರೆಸ್ ವಲಯದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದೆ.

ಸಚಿವ ಸ್ಥಾನ ಕೈತಪ್ಪಿದ್ದಕ್ಕೆ ಅಸಮಾಧಾನಗೊಂಡ ವಿಜಯಪುರ ಜಿಲ್ಲೆಯ ಇಂಡಿ ಶಾಸಕ ಯಶವಂತರಾಯಗೌಡ ಪಾಟೀಲ ಅವರು ವಿಧಾನಸಭಾಧ್ಯಕ್ಷ ರುದ್ರಪ್ಪ ಲಮಾಣಿ ಅವರಿಗೆ ಶಾಸಕ ಸ್ಥಾನಕ್ಕೆ ರಾಜೀನಾಮೆ ಪತ್ರ ಸಲ್ಲಿಸಿರುವುದಾಗಿ ತಿಳಿದುಬಂದಿದೆ. 2ನೇ ಪುಟಕ್ಕೆ





### ಡಿಕೆಶಿ ಸಂಪುಟಕ್ಕೆ 19 ಸಚಿವರ ಸೇರ್ಪಡೆ

● ವಿಕ್ರಮ ವಾಹಿನಿ । ಬೆಂಗಳೂರು

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ರಾಜ್ಯ ಸರ್ಕಾರದ ಮೊದಲ ಸಚಿವ ಸಂಪುಟ ವಿಸ್ತರಣೆಯಲ್ಲಿ 19 ಮಂದಿ ಶಾಸಕರು ಸೋಮವಾರ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದರು. ರಾಜಭವನದ ಗಾಜಿನ ಮನೆಯಲ್ಲಿ ನಡೆದ ಸಮಾರಂಭದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ನೂತನ ಸಚಿವರಿಗೆ ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣವಚನ ಬೋಧಿಸಿದರು.

ಡಾ. ಅಜಯ್ ಧರಂ ಸಿಂಗ್, ಎಚ್.ಡಿ. ಬಾಲಕೃಷ್ಣ, ಕೆ.ಎಸ್. ಬಸವಂತಪ್ಪ, ಬಸವರಾಜ ರಾಯರೆಡ್ಡಿ, ಎನ್. ಚೆಲುವರಾಯಸ್ವಾಮಿ, ಲಕ್ಷ್ಮಣ ಸವದಿ, ಮಧು ಬಂಗಾರಪ್ಪ, ಎಸ್.ಎಸ್. ಮಲ್ಲಿಕಾರ್ಜುನ್, ಬಿ. ನಾಗೇಂದ್ರ, ಎಂ.ಪಿ. ನರೇಂದ್ರಸ್ವಾಮಿ, ಸಿ. ಪುಟ್ಟರಂಗ ಶೆಟ್ಟಿ, ಟಿ. ರಘುಮೂರ್ತಿ, ರಿಜ್ವಾನ್ ಅರ್ಷದ್, ರುದ್ರಪ್ಪ ಲಮಾಣಿ, ಸಂತೋಷ್ ಲಾಡ್, ಕೆ.ಎಂ. ಶಿವಲಿಂಗೇಗೌಡ, ಶಿವರಾಜ್ ತಂಗಡಗಿ, ವಿಜಯಾನಂದ ಕಾಶಪ್ಪನವರ್ ಹಾಗೂ ಜಮೀರ್ ಅಹ್ಮದ್ ಖಾನ್ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದರು.

ವಿಧಾನಪರಿಷತ್ ಸದಸ್ಯೆ ಗಾಯತ್ರಿ ಶಾಂತೇಗೌಡ ಸಚಿವೆಯಾಗುವ ನಿರೀಕ್ಷೆ ಇದ್ದರೂ ಅಂತಿಮವಾಗಿ 19 ಮಂದಿಗೆ ಮಾತ್ರ ಅವಕಾಶ ದೊರೆತಿದ್ದು, ಸಚಿವ ಸಂಪುಟದಲ್ಲಿ ಮಹಿಳಾ ಪ್ರತಿನಿಧಿತ್ವ ಇಲ್ಲದಿರುವುದು ಗಮನ ಸೆಳೆಯಿತು. ಇದೇ ವೇಳೆ ವಿಧಾನಸಭಾಧ್ಯಕ್ಷ ಸ್ಥಾನಕ್ಕೆ ಜಿ.ಎಸ್. ಪಾಟೀಲ್, ಉಪಸಭಾಧ್ಯಕ್ಷ ಸ್ಥಾನಕ್ಕೆ ಎ.ಎಸ್. ಪೊನ್ನಣ್ಣ, ವಿಧಾನಪರಿಷತ್ ಸಭಾಪತಿಯಾಗಿ ಸಲೀಂ ಅಹ್ಮದ್ ಹಾಗೂ ಉಪಸಭಾಪತಿಯಾಗಿ ಉಮಾಶ್ರೀ ಅವರ ಹೆಸರನ್ನು ಕಾಂಗ್ರೆಸ್ ಹೈಕಮಾಂಡ್ ಅನುಮೋದಿಸಿದೆ. ಸಮಾರಂಭದಲ್ಲಿ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್, ಸಚಿವರು, ಶಾಸಕರು ಹಾಗೂ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

### 'ಶಿವ ಸೈನ್ಯ'ಕ್ಕೆ ಮುನ್ನುಡಿ, ಅಸಮಾಧಾನದ ಕಿಡಿ, ಮುಂದಿದೆ ಸವಾಲಿನ ಹಾದಿ

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಪೂರ್ಣ ಪ್ರಮಾಣದ ಸಚಿವ ಸಂಪುಟ ಅಸ್ತಿತ್ವಕ್ಕೆ ಬಂದ ಬೆನ್ನಲ್ಲೇ ಕಾಂಗ್ರೆಸ್‌ನಲ್ಲಿ ಅಸಮಾಧಾನದ ಹೊಗೆ ದಟ್ಟವಾಗಿದೆ. ಸಚಿವ ಸ್ಥಾನ ಕೈತಪ್ಪಿದ ಶಾಸಕರು ಹಾಗೂ ಅವರ ಬೆಂಬಲಿಗರು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಪ್ರತಿಭಟನೆಗೆ ಇಳಿದಿದ್ದು, ಹೈಕಮಾಂಡ್ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕೆಲವು ಶಾಸಕರು ರಾಜೀನಾಮೆಯ ಎಚ್ಚರಿಕೆ ನೀಡಿರುವುದು ಪಕ್ಷದ ನಾಯಕತ್ವಕ್ಕೆ ಹೊಸ ಸವಾಲಾಗಿ ಪರಿಣಮಿಸಿದೆ.

ಸಚಿವ ಸಂಪುಟ ವಿಸ್ತರಣೆಯಲ್ಲಿ ಸ್ಥಾನ ಸಿಗದಿದ್ದಕ್ಕೆ ಮೈಸೂರಿನಲ್ಲಿ ತನ್ವೀರ್ ಸೇಠ್ ಅಸಮಾಧಾನ ವ್ಯಕ್ತಪಡಿಸಿದರೆ, ಹುಬ್ಬಳ್ಳಿ, ಬೆಳಗಾವಿ, ಕೊಪ್ಪಳ, ಚಿಕ್ಕಬಳ್ಳಾಪುರ, ಹಾವೇರಿ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಕಾರ್ಯಕರ್ತರು ರಸ್ತೆ ತಡೆ, ಟೈರ್‌ಗೆ ಬೆಂಕಿ ಹಚ್ಚಿ ಪ್ರತಿಭಟನೆ ನಡೆಸಿದರು. ಇಂಡಿ ಶಾಸಕ ಯಶವಂತರಾಯಗೌಡ ಪಾಟೀಲ ಹಾಗೂ ಸಾಗರ ಶಾಸಕ ಬೇಳೂರು ಗೋಪಾಲಕೃಷ್ಣ ಅವರು ರಾಜೀನಾಮೆ ಸೂಚಿಸುವ ಹೇಳಿಕೆ ನೀಡಿರುವುದು ಪಕ್ಷದೊಳಗಿನ ಅಸಮಾಧಾನ ಮತ್ತಷ್ಟು ಉಲ್ಬಣಿಸಿರುವ ಸೂಚನೆ ನೀಡಿದೆ.

### ಪೈಪೋಟಿ, ಸಮೀಕರಣ, ಆದರೂ ಅಸಮಾಧಾನ ಶಮನವಾಗಿಲ್ಲ

ಕೊಡಗಿನಲ್ಲಿ ಎ.ಎಸ್. ಪೊನ್ನಣ್ಣ ಹಾಗೂ ಡಾ. ಮಂತರ್‌ಗೌಡ, ಉತ್ತರ ಕನ್ನಡದಲ್ಲಿ ಮಂಕಾಳ ವೈದ್ಯ ಹಾಗೂ ಆರ್.ವಿ. ದೇಶಪಾಂಡೆ, ಯಾದಗಿರಿಯಲ್ಲಿ ಚನ್ನಾರೆಡ್ಡಿ ಪಾಟೀಲ, ವಿಜಯನಗರದಲ್ಲಿ ಎಚ್.ಆರ್. ಗವಿಯಪ್ಪ ಸೇರಿದಂತೆ ಹಲವು ಪ್ರಬಲ ಆಕಾಂಕ್ಷಿಗಳಿಗೆ ಸಚಿವ ಸ್ಥಾನ ಸಿಗದಿರುವುದು ಅಸಮಾಧಾನಕ್ಕೆ ಕಾರಣವಾಗಿದೆ. ಹುಬ್ಬಳ್ಳಿಯಲ್ಲಿ ಶಾಸಕ ಪ್ರಸಾದ್ ಅಬ್ಬಯ್ಯ ಅವರಿಗೆ ಸಚಿವ ಸ್ಥಾನ ಕೈತಪ್ಪಿದ್ದಕ್ಕೆ ಬೆಂಬಲಿಗರು ಕಾಂಗ್ರೆಸ್ ಹೈಕಮಾಂಡ್ ವಿರುದ್ಧ ಘೋಷಣೆ ಕೂಗಿ ಪ್ರತಿಭಟನೆ ನಡೆಸಿದರು.

ಜಾತಿ, ಪ್ರಾದೇಶಿಕ ಹಾಗೂ ರಾಜಕೀಯ ಸಮೀಕರಣಗಳನ್ನು ಗಮನದಲ್ಲಿಟ್ಟುಕೊಂಡು ಸಚಿವ ಸಂಪುಟ ರಚನೆ ಮಾಡಿದ್ದರೂ, ಅವಕಾಶ ವಂಚಿತ ಶಾಸಕರು ಮತ್ತು ಅವರ ಬೆಂಬಲಿಗರ ಆಕ್ರೋಶ ಕಾಂಗ್ರೆಸ್ ನಾಯಕತ್ವಕ್ಕೆ ಹೊಸ ತಲೆನೋವಾಗಿ ಪರಿಣಮಿಸಿದೆ. ವಿಧಾನಸಭೆ ಚುನಾವಣೆಗೆ ಕೇವಲ 18 ತಿಂಗಳು ಬಾಕಿ ಇರುವ ಹೊತ್ತಿನಲ್ಲಿ ಈ ಅಸಮಾಧಾನವನ್ನು ಹತೋಟಿಗೆ ತರುವುದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಕಾಂಗ್ರೆಸ್ ಹೈಕಮಾಂಡ್ ಮುಂದಿರುವ ದೊಡ್ಡ ರಾಜಕೀಯ ಸವಾಲಾಗಿದೆ.

### ಜಿಲ್ಲೆಗಳಿಗೆ ನಿರಾಸೆ


ಸಚಿವ ಸಂಪುಟದಲ್ಲಿ ಪ್ರತಿನಿಧಿತ್ವ ಸಿಗಲಿದೆ ಎಂಬ ನಿರೀಕ್ಷೆಯಲ್ಲಿದ್ದ ಚಿಕ್ಕಬಳ್ಳಾಪುರ, ಕೋಲಾರ, ತುಮಕೂರು, ಕೊಡಗು, ಉತ್ತರ ಕನ್ನಡ, ಯಾದಗಿರಿ, ವಿಜಯನಗರ ಸೇರಿದಂತೆ ಹಲವು ಜಿಲ್ಲೆಗಳು ಮತ್ತೊಮ್ಮೆ ನಿರಾಸೆ ಅನುಭವಿಸಿವೆ.

ಚಿಕ್ಕಬಳ್ಳಾಪುರದಲ್ಲಿ ಎಸ್.ಎನ್.ಸುಬ್ಬಾರೆಡ್ಡಿ, ಡಾ. ಎಂ.ಸಿ. ಸುಧಾಕರ್ ಹಾಗೂ ಪ್ರದೀಪ್ ಈಶ್ವರ್ ಅವರ ಬೆಂಬಲಿಗರು ನಿರಾಸೆ ವ್ಯಕ್ತಪಡಿಸಿದರೆ, ಕೋಲಾರದಲ್ಲಿ ಎಸ್.ಎನ್.ನಾರಾಯಣಸ್ವಾಮಿ, ಕೆ.ವೈ. ನಂಜೇಗೌಡ, ರೂಪಕಲಾ ಶಶಿಧರ್ ಹಾಗೂ ಕೊತ್ತೂರು ಮಂಜುನಾಥ್ ಅವರ ಬೆಂಬಲಿಗರು ಅವಕಾಶ ಕೈತಪ್ಪಿದ್ದಕ್ಕೆ ಬೇಸರ ವ್ಯಕ್ತಪಡಿಸಿದ್ದಾರೆ.

ತುಮಕೂರಿನಲ್ಲಿ ಟಿ.ಬಿ. ಜಯಚಂದ್ರ ಅವರಿಗೆ ಸಚಿವ ಸ್ಥಾನ ಸಿಗದಿರುವುದು ಕಾರ್ಯಕರ್ತರ ಆಕ್ರೋಶಕ್ಕೆ ಕಾರಣವಾಗಿದ್ದರೆ, ಬೆಂಗಳೂರು ಗ್ರಾಮಾಂತರದಲ್ಲಿ ಆನೇಕಲ್ ಶಾಸಕ ಬಿ. ಶಿವಣ್ಣ ಬೆಂಬಲಿಗರು ರಸ್ತೆ ತಡೆ ನಡೆಸಿ ಟೈರ್‌ಗಳಿಗೆ ಬೆಂಕಿ ಹಚ್ಚಿ ಪ್ರತಿಭಟಿಸಿದರು.

ಚಿಕ್ಕಮಗಳೂರಿನಲ್ಲಿ ಕೊನೆಯ ಕ್ಷಣದಲ್ಲಿ ಗಾಯತ್ರಿ ಶಾಂತೇಗೌಡ ಅವರ ಹೆಸರು ಪಟ್ಟಿಯಿಂದ ಕೈಬಿಟ್ಟಿರುವುದು ಕಾಂಗ್ರೆಸ್ ಕಾರ್ಯಕರ್ತರಿಗೆ ಭಾರೀ ನಿರಾಸೆ ಉಂಟುಮಾಡಿದೆ.

### ಪಟ್ಟಿಯಲ್ಲಿದ್ದರೂ ಕೈತಪ್ಪಿದ ಮಂತ್ರಿಗಿರಿ! ಗಾಯತ್ರಿ ಶಾಂತೇಗೌಡಗೆ ಕೊನೇ ಕ್ಷಣದ ಶಾಕ್
## ಸಿದ್ದು ಮುನಿಸು?; ಕೈಕಮಾಂಡ್‌ಗೆ ಮುಜುಗರ



ಸಚಿವ ಸಂಪುಟ ವಿಸ್ತರಣೆಯ ಕೊನೆಯ ಕ್ಷಣದಲ್ಲಿ ಪರಿಷತ್ ಸದಸ್ಯೆ ಗಾಯತ್ರಿ ಶಾಂತೇಗೌಡ ಅವರಿಗೆ ಮಂತ್ರಿಗಿರಿ ಕೈತಪ್ಪಿದೆ. ಆರಂಭಿಕ ಪಟ್ಟಿಯಲ್ಲಿ ಹೆಸರು ಇದ್ದರೂ, ರಾಜಕೀಯ ಸಮೀಕರಣಗಳು ಮತ್ತು ಪಕ್ಷದೊಳಗಿನ ಚರ್ಚೆಗಳ ಹಿನ್ನೆಲೆಯಲ್ಲಿ ಅಂತಿಮ ಪಟ್ಟಿಯಿಂದ ಹೆಸರು ಕೈಬಿಡಲಾಗಿದೆ ಎಂದು ಮೂಲಗಳು ತಿಳಿಸಿವೆ.

ನೂತನ ಸಚಿವ ಸಂಪುಟ ವಿಸ್ತರಣೆಯಲ್ಲಿ ಮಂತ್ರಿಯಾಗುವುದು ಬಹುತೇಕ ಖಚಿತ ಎನ್ನಲಾಗಿದ್ದ ಪರಿಷತ್ ಸದಸ್ಯೆ ಗಾಯತ್ರಿ ಶಾಂತೇಗೌಡ ಅವರಿಗೆ ಕೊನೆ ಕ್ಷಣದಲ್ಲಿ ಮಂತ್ರಿಗಿರಿ ಕೈತಪ್ಪಿದೆ. ಆರಂಭಿಕ ಪಟ್ಟಿಯಲ್ಲಿ ಹೆಸರು ಸ್ಥಾನ ಪಡೆದಿದ್ದರೂ, ಅಂತಿಮ ಕ್ಷಣದಲ್ಲಿ ನಡೆದ ರಾಜಕೀಯ ಬೆಳವಣಿಗೆಗಳು ಅವರ ಅವಕಾಶಕ್ಕೆ ಬ್ರೇಕ್ ಹಾಕಿವೆ.

ಕುರುಬ ಸಮುದಾಯಕ್ಕೆ ಸೇರಿದ ಗಾಯಿತ್ರಿ ಶಾಂತೇಗೌಡ ಅವರ ಬಗ್ಗೆ ಹಲವು ಸಭೆಗಳಲ್ಲಿ ಪ್ರಸ್ತಾಪವಾದಾಗ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಅಭಿಪ್ರಾಯ ಮಂಡಿಸಿದ್ದರು ಎನ್ನಲಾಗಿದ್ದು, ಮಹಿಳಾ ಕೋಟಾದಲ್ಲಿ ಇತರೆ ಪ್ರಮುಖರು ಇದ್ದರೂ ಸಹ ಗಾಯಿತ್ರಿ ಶಾಂತೇಗೌಡ ಅವರು ಹೆಸರು ಪಟ್ಟಿಯಲ್ಲಿ ಇರುವುದನ್ನು ಕಂಡು ಸಿದ್ದರಾಮಯ್ಯ ಅವರು ಮುನಿಸಿಕೊಂಡಿದ್ದು, ಇದರಿಂದಾಗಿಯೇ ಪ್ರಮಾಣ ವಚನ ಸಮಾರಂಭಕ್ಕೆ ಗೈರಾಗಿದ್ದರು ಎಂದೂ ಹೇಳಲಾಗುತ್ತಿದೆ.

ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಕೈಕಮಾಂಡ್ ಕಡೆ ಘಳಿಗೆಯಲ್ಲಿ ಗಾಯಿತ್ರಿ ಶಾಂತೇಗೌಡ ಅವರ ಹೆಸರನ್ನು ಕೈಬಿಟ್ಟಿತು ಎಂದೂ ಹೇಳಲಾಗುತ್ತಿದೆ.

ಮೊದಲಿಗೆ 20 ಮಂದಿ ನೂತನ ಸಚಿವರ ಪಟ್ಟಿಯಲ್ಲಿ ಗಾಯತ್ರಿ ಶಾಂತೇಗೌಡ ಅವರ ಹೆಸರಿದ್ದು, ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸುವ ಸಾಧ್ಯತೆ ಬಹುತೇಕ ಖಚಿತವಾಗಿತ್ತು. ಆದರೆ ಪರಿಷತ್ ಸದಸ್ಯೆಯಾಗಿ ಅವರು ಇನ್ನೂ ಪ್ರಮಾಣ ವಚನ ಸ್ವೀಕರಿಸದಿರುವ ವಿಚಾರ ಪಕ್ಷದೊಳಗೆ ಚರ್ಚೆಗೆ ಗ್ರಾಸವಾಗಿದ್ದು, ಇದಕ್ಕೆ ಕೆಲವು ನಾಯಕರು ಆಕ್ಷೇಪ ವ್ಯಕ್ತಪಡಿಸಿದ್ದರೆಂದು ತಿಳಿದುಬಂದಿದೆ.

ಇದರ ಜತೆಗೆ ಮಹಿಳಾ ಕೋಟಾದ ಸಚಿವ ಸ್ಥಾನಕ್ಕಾಗಿ ಲಕ್ಷ್ಮಿ ಹೆಬ್ಬಾಳ್ಕರ್ ಮತ್ತು ಉಮಾಶ್ರೀ ಅವರ ಹೆಸರನ್ನೂ ಬಲವಾಗಿ ಪರಿಗಣಿಸಲಾಗಿತ್ತು. ಮಹಿಳಾ ಪ್ರತಿನಿಧಿತ್ವದ ವಿಚಾರದಲ್ಲಿ ಕಾಂಗ್ರೆಸ್ ನಾಯಕತ್ವದೊಳಗೆ ತೀವ್ರ ಚರ್ಚೆ ನಡೆದ ಹಿನ್ನೆಲೆಯಲ್ಲಿ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಿವಾಸದಲ್ಲಿ ಮಹತ್ವದ ಸಭೆ ನಡೆಸಲಾಯಿತು ಎನ್ನಲಾಗಿದೆ. ಕೊನೆ ಕ್ಷಣದಲ್ಲಿ ರಾಜ್ಯ ನಾಯಕರಿಂದ ವ್ಯಕ್ತವಾದ ಒತ್ತಡ ಹಾಗೂ ರಾಜಕೀಯ ಸಮೀಕರಣಗಳನ್ನು ಗಮನದಲ್ಲಿಟ್ಟುಕೊಂಡು ಕಾಂಗ್ರೆಸ್ ವರಿಷ್ಠರು ಗಾಯತ್ರಿ ಶಾಂತೇಗೌಡ ಅವರ ಹೆಸರನ್ನು ಅಂತಿಮ ಪಟ್ಟಿಯಿಂದ ಕೈಬಿಟ್ಟಿದ್ದಾರೆ ಎಂದು ಮೂಲಗಳು ತಿಳಿಸಿವೆ. ಇದರಿಂದ ಕೊನೆಯ ಕ್ಷಣದವರೆಗೂ ಮಂತ್ರಿಯಾಗಲಿದ್ದಾರೆ ಎಂಬ ನಿರೀಕ್ಷೆಯಲ್ಲಿದ್ದ ಗಾಯತ್ರಿ ಅವರಿಗೆ ಅನಿರೀಕ್ಷಿತ ನಿರಾಸೆಯಾಗಿದೆ.

೩ ಪುಟಕ್ಕೆ



ಆರ್ಟ್ ಆಫ್ ಲಿವಿಂಗ್ ಫೌಂಡೇಶನ್‌ಗೆ ಸೇರಿದ ವೇದ ವಿಜ್ಞಾನ ಮಹಾ ವಿದ್ಯಾ ಪೀಠ ಟ್ರಸ್ಟ್ (ವಿವಿಎಂವಿಪಿಟಿ) ವಿರುದ್ಧದ ಸರ್ಕಾರಿ ಭೂಮಿ ಒತ್ತುವರಿ ಆರೋಪಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಕ್ಕೆ ಕರ್ನಾಟಕ ಹೈಕೋರ್ಟ್ ತಡೆ ನೀಡಿದೆ.



ಕೋಲಾರ ಜಿಲ್ಲೆಯ ತಂಬಿಹಳ್ಳಿಯ ಶ್ರೀಮನ್ಮಾಧವತೀರ್ಥ ಮಠದ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ ವಿದ್ಯಾವಲ್ಲಭ ಮಾಧವತೀರ್ಥ ಶ್ರೀಪಾದರ 6ನೇ ಚಾತುರ್ಮಾಸ್ಯ ಮಹೋತ್ಸವವು ಆಗಸ್ಟ್ 8ರಿಂದ ಸೆಪ್ಟೆಂಬರ್ 26ರವರೆಗೆ ಯಲಹಂಕ ಸಮೀಪದ ಕಾಕೋಳಿನ ಶ್ರೀ ವೇಣುಗೋಪಾಲಸ್ವಾಮಿ ದೇವಸ್ಥಾನದಲ್ಲಿ ನಡೆಯಲಿದೆ. ಚಾತುರ್ಮಾಸ್ಯ ಅವಧಿಯಲ್ಲಿ ಪ್ರತಿದಿನ ವಿಶೇಷ ಪೂಜೆ, ವೇದಪಾರಾಯಣ, ಧಾರ್ಮಿಕ ಪ್ರವಚನ, ಭಜನೆ, ದಾಸವಾಣಿ ಸೇರಿದಂತೆ ವಿವಿಧ ಆಧ್ಯಾತ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

ಪಾಂಡಿಚೇರಿಯಲ್ಲಿ ಜುಲೈ 30ರಿಂದ ಆಗಸ್ಟ್ 2ರವರೆಗೆ ನಡೆದ ನ್ಯಾಷನಲ್ ಓಪನ್ ಚಾಂಪಿಯನ್‌ಶಿಪ್ ಸ್ಕೇಟಿಂಗ್ ಸ್ಪರ್ಧೆಯಲ್ಲಿ ಬೆಂಗಳೂರಿನ 6ನೇ ತರಗತಿ ವಿದ್ಯಾರ್ಥಿ ಅಹೀಶ್ ಎಂ. ಮಠಂ ಗಮನಾರ್ಹ ಸಾಧನೆ ಮಾಡಿದ್ದಾರೆ.



www.VIKRAMAVAHINI.com
|| ಕನ್ನಡ ದಿನಪತ್ರಿಕೆ ||

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

### ಸವಿ ವಾಹಿನಿ

ಪ್ರತಿಯೊಂದು ಹೊಸ ಮುಂಜಾನೆಯು ಭಗವಂತ ನಮಗೆ ನೀಡಿದ ಹೊಸ ಅವಕಾಶ. ನೆನ್ನೆಯ ಚಿಂತೆಗಳನ್ನು ಬದಿಗಿಟ್ಟು, ಇಂದಿನ ಕ್ಷಣವನ್ನು ಪೂರ್ಣ ನಂಬಿಕೆ ಮತ್ತು ಉತ್ಸಾಹದಿಂದ ಸ್ವೀಕರಿಸಿ. ಸತತ ಪ್ರಯತ್ನ ಹಾಗೂ ಸಕಾರಾತ್ಮಕ ಆಲೋಚನೆಗಳಿದ್ದಾಗ ಯಾವುದೇ ಕಷ್ಟವೂ ಸುಲಭದ ಹಾದಿಯಾಗುತ್ತದೆ.!!

### ದಿನ ಪಂಚಾಂಗ

ಆಗಸ್ಟ್, 4-2026 ಗ್ರೀಷ್ಮ ಋತು, ಆಷಾಢ ಮಾಸ, ಬಹುಳ ಪಕ್ಷ. ಷಷ್ಠಿ ತಿಥಿ ರಾ-7:17
ರೇವತಿ ನಕ್ಷತ್ರ ರಾ-8:19
ರಾಹುಕಾಲ ಮಾ-3:34-5:09
ಗ್ರೀಷ್ಮ ಋತು, ಆಷಾಢ ಮಾಸ, ಬಹುಳ ಪಕ್ಷ
ಬಾಲಗಂಗಾಧರ ತಿಲಕ್ ಜ., ಚಾಮುಂಡೇಶ್ವರೀ ವರ್ಧಂತಿ ಉತ್ಸವ, ಅಬ್ಬಿಗೇರಿ ಹಿರೇಮಠ ವೀರಭದ್ರಸ್ವಾಮಿ ಪುಣ್ಯದಿನ

### ಸಂಪಾದಕೀಯ

## ನೇಮಕಾತಿಯ ಹೊಸ ಭರವಸೆ: ಪಾರದರ್ಶಕತೆಯೇ ಯಶಸ್ಸಿನ ಮಾನದಂಡ

ರಾಜ್ಯದ ಸಾವಿರಾರು ನಿರುದ್ಯೋಗಿ ಯುವಕರ ಬಹುದಿನಗಳ ನಿರೀಕ್ಷೆಗೆ ಕೊನೆಗೂ ಸ್ಪಂದಿಸಿರುವ ರಾಜ್ಯ ಸರ್ಕಾರ, ಸುಮಾರು 72 ಸಾವಿರ ಹುದ್ದೆಗಳ ನೇಮಕಾತಿ ಪ್ರಕ್ರಿಯೆಗೆ ಚಾಲನೆ ನೀಡಿರುವುದು ಸ್ವಾಗತಾರ್ಹ ಬೆಳವಣಿಗೆ. ಹಲವು ವರ್ಷಗಳಿಂದ ವಿವಿಧ ಇಲಾಖೆಗಳಲ್ಲಿ ಸಾವಿರಾರು ಹುದ್ದೆಗಳು ಖಾಲಿ ಉಳಿದಿದ್ದರಿಂದ ಆಡಳಿತದ ಕಾರ್ಯಕ್ಷಮತೆ ಕುಂಠಿತಗೊಂಡಿದ್ದರೆ, ಮತ್ತೊಂದೆಡೆ ಉದ್ಯೋಗಾಕಾಂಕ್ಷಿಗಳಲ್ಲಿ ತೀವ್ರ ನಿರಾಸೆ ಮನೆ ಮಾಡಿತ್ತು. ಪದವಿ, ಸ್ನಾತಕೋತ್ತರ ಹಾಗೂ ವೃತ್ತಿಪರ ಶಿಕ್ಷಣ ಪೂರ್ಣಗೊಳಿಸಿ ಉದ್ಯೋಗಕ್ಕಾಗಿ ಕಾಯುತ್ತಿದ್ದ ಲಕ್ಷಾಂತರ ಯುವಕರಿಗೆ ಈ ಘೋಷಣೆ ಹೊಸ ಭರವಸೆ ಮೂಡಿಸಿದೆ. ಸರ್ಕಾರಿ ಉದ್ಯೋಗವು ಇಂದಿಗೂ ಭದ್ರತೆ, ಸ್ಥಿರತೆ ಮತ್ತು ಗೌರವದ ಸಂಕೇತವಾಗಿರುವ ಹಿನ್ನೆಲೆಯಲ್ಲಿ ಈ ನೇಮಕಾತಿ ಪ್ರಕ್ರಿಯೆ ಕೇವಲ ಉದ್ಯೋಗ ನೀಡುವ ಕಾರ್ಯಕ್ರಮವಲ್ಲ; ಆಡಳಿತ ವ್ಯವಸ್ಥೆಗೆ ಹೊಸ ಚೈತನ್ಯ ತುಂಬುವ ಮತ್ತು ಯುವಜನರಲ್ಲಿ ಸರ್ಕಾರದ ಮೇಲಿನ ವಿಶ್ವಾಸವನ್ನು ಪುನಃ ಬಲಪಡಿಸುವ ಮಹತ್ವದ ಹೆಜ್ಜೆಯಾಗಿದೆ. ಈ ಅವಕಾಶವನ್ನು ಸರ್ಕಾರ ಸಮರ್ಥವಾಗಿ ಬಳಸಿಕೊಳ್ಳಬೇಕಿದೆ.

ಆದರೆ ಯಾವುದೇ ನೇಮಕಾತಿ ಪ್ರಕ್ರಿಯೆಯ ಯಶಸ್ಸು ಕೇವಲ ಪರೀಕ್ಷೆ ನಡೆಸುವುದರಲ್ಲಿ ಇಲ್ಲ; ಅದು ಎಷ್ಟರ ಮಟ್ಟಿಗೆ ನಿಷ್ಪಕ್ಷಪಾತ, ಪಾರದರ್ಶಕ ಮತ್ತು ದೋಷರಹಿತವಾಗಿ ನಡೆಯುತ್ತದೆ ಎಂಬುದರ ಮೇಲೆ ಅವಲಂಬಿತವಾಗಿರುತ್ತದೆ. ಇತ್ತೀಚೆಗೆ ದೇಶವನ್ನೇ ತಲ್ಲಣಗೊಳಿಸಿದ್ದ ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣ ಸಾರ್ವಜನಿಕರ ವಿಶ್ವಾಸಕ್ಕೆ ದೊಡ್ಡ ಹೊಡೆತ ನೀಡಿತ್ತು. ಅಂತಹ ಸಂದರ್ಭದಲ್ಲಿ ರಾಜ್ಯದಲ್ಲಿ ಭಾನುವಾರ ನಡೆದ ನೇಮಕಾತಿ ಪರೀಕ್ಷೆಗಳು ಬಹುತೇಕ ಕಡೆ ಸುಗಮವಾಗಿ ನಡೆದಿರುವುದು ಸಮಾಧಾನಕರವಾದರೂ, ಕೆಲವು ಪರೀಕ್ಷಾ ಕೇಂದ್ರಗಳಲ್ಲಿ ತಾಂತ್ರಿಕ ದೋಷ, ಅವ್ಯವಸ್ಥೆ, ಪ್ರಶ್ನೆಪತ್ರಿಕೆ ವಿತರಣೆ ವಿಳಂಬ ಹಾಗೂ ಅಭ್ಯರ್ಥಿಗಳು ತೊಂದರೆ ಅನುಭವಿಸಿದ ಬಗ್ಗೆ ವರದಿಗಳು ಕೇಳಿಬಂದಿವೆ. ಇಂತಹ ಸಣ್ಣ ಲೋಪಗಳೂ ಸಾವಿರಾರು ಅಭ್ಯರ್ಥಿಗಳ ಭವಿಷ್ಯವನ್ನು ಬಾಧಿಸಬಹುದಾದ ಕಾರಣ ಸರ್ಕಾರ ಯಾವುದೇ ದೂರನ್ನು ಲಘುವಾಗಿ ಪರಿಗಣಿಸಬಾರದು. ಪ್ರತಿಯೊಂದು ದೂರುವನ್ನೂ ಸೂಕ್ಷ್ಮವಾಗಿ ಪರಿಶೀಲಿಸಿ ಸತ್ಯಾಸತ್ಯತೆ ತಿಳಿಯಬೇಕು.

ಈಗ ಸರ್ಕಾರದ ಮುಂದೆ ಅತ್ಯಂತ ದೊಡ್ಡ ಜವಾಬ್ದಾರಿ ಪಾರದರ್ಶಕತೆಯನ್ನು ಕಾಪಾಡುವುದಾಗಿದೆ. ಗೊಂದಲ ಉಂಟಾದ ಕೇಂದ್ರಗಳಲ್ಲಿ ಸ್ವತಂತ್ರ ತನಿಖೆ ನಡೆಸಿ, ಅಭ್ಯರ್ಥಿಗಳಿಗೆ ಅನ್ಯಾಯವಾಗಿದೆ ಎಂಬುದು ಸಾಬೀತಾದರೆ ಯಾವುದೇ ಹಿಂಜರಿಕೆಯಿಲ್ಲದೆ ಮರುಪರೀಕ್ಷೆ ನಡೆಸಬೇಕು. ಅರ್ಹತೆ, ಪ್ರತಿಭೆ ಮತ್ತು ನ್ಯಾಯಸಮ್ಮತ ಆಯ್ಕೆಯೇ ನೇಮಕಾತಿಯ ಮೂಲ ತತ್ವವಾಗಬೇಕು. ಹಲವು ವರ್ಷಗಳಿಂದ ಉದ್ಯೋಗಕ್ಕಾಗಿ ಚಾತಕ ಪಕ್ಷಿಯಂತೆ ಕಾಯುತ್ತಿರುವ ವಿದ್ಯಾವಂತ ಯುವಕರ ಕನಸುಗಳಿಗೆ ಧಕ್ಕೆಯಾಗದಂತೆ ಸರ್ಕಾರ ಪ್ರತಿ ಹಂತದಲ್ಲೂ ಪ್ರಾಮಾಣಿಕತೆ, ಪಾರದರ್ಶಕತೆ ಹಾಗೂ ಹೊಣೆಗಾರಿಕೆಯನ್ನು ಪ್ರದರ್ಶಿಸಿದರೆ ಮಾತ್ರ ಈ ಬೃಹತ್ ನೇಮಕಾತಿ ಅಭಿಯಾನ ನಿಜವಾದ ಅರ್ಥದಲ್ಲಿ ಯಶಸ್ವಿಯಾಗಿ, ಯುವಜನರಲ್ಲಿ ಸರ್ಕಾರದ ಮೇಲಿನ ವಿಶ್ವಾಸವನ್ನು ಮತ್ತಷ್ಟು ಗಟ್ಟಿಗೊಳಿಸಲಿದೆ.

# ಆರ್ಟ್ ಆಫ್ ಲಿವಿಂಗ್ ಭೂ ಒತ್ತುವರಿ ಪ್ರಕರಣಕ್ಕೆ ಹೈಕೋರ್ಟ್ ತಡೆಯಾಜ್ಞೆ



**ಆರ್ಟ್ ಆಫ್ ಲಿವಿಂಗ್‌ಗೆ ಸಂಬಂಧಿಸಿದ ವೇದ ವಿಜ್ಞಾನ ಮಹಾ ವಿದ್ಯಾ ಪೀಠ ಟ್ರಸ್ಟ್ ವಿರುದ್ಧದ ಸರ್ಕಾರಿ ಭೂಮಿ ಒತ್ತುವರಿ ಆರೋಪದ ಸರ್ಕಾರಿ ಆದೇಶಕ್ಕೆ ಕರ್ನಾಟಕ ಹೈಕೋರ್ಟ್ ತಡೆ ನೀಡಿದೆ. ಜಂಟಿ ಸಮೀಕ್ಷೆ ನಡೆಸದೆ ಆದೇಶ ಹೊರಡಿಸಿರುವುದನ್ನು ಪ್ರಶ್ನಿಸಿದ ನ್ಯಾಯಾಲಯ, ಪ್ರಕರಣದ ಮುಂದಿನ ವಿಚಾರಣೆಯನ್ನು ಆಗಸ್ಟ್ 17ಕ್ಕೆ ಮುಂದೂಡಿದೆ.**

● ವಿಕ್ರಮ ವಾಹಿನಿ । ಬೆಂಗಳೂರು

ಆರ್ಟ್ ಆಫ್ ಲಿವಿಂಗ್ ಫೌಂಡೇಶನ್‌ಗೆ ಸೇರಿದ ವೇದ ವಿಜ್ಞಾನ ಮಹಾ ವಿದ್ಯಾ ಪೀಠ ಟ್ರಸ್ಟ್ (ವಿವಿಎಂವಿಪಿಟಿ) ವಿರುದ್ಧದ ಸರ್ಕಾರಿ ಭೂಮಿ ಒತ್ತುವರಿ ಆರೋಪಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಕ್ಕೆ ಕರ್ನಾಟಕ ಹೈಕೋರ್ಟ್ ತಡೆ ನೀಡಿದೆ.

ಟ್ರಸ್ಟ್ ವಿರುದ್ಧದ ಆರೋಪಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಲು ವಿಶೇಷ ತನಿಖಾ ತಂಡ ರಚಿಸಲಾಗಿದೆ ಎಂದು ಸರ್ಕಾರದ ಆದೇಶದಲ್ಲಿ ಹೇಳಲಾಗಿದೆ.

ಟ್ರಸ್ಟ್ ಭೂ ಒತ್ತುವರಿ ಮಾಡಿದೆ ಎಂಬುದಕ್ಕೆ ಸಂಬಂಧಿಸಿದಂತೆ ಸರ್ಕಾರ ಆದೇಶ ಹೊರಡಿಸುವುದಕ್ಕೂ ಮುನ್ನ ಸಕ್ಷಮ ಪ್ರಾಧಿಕಾರವು ಕಡ್ಡಾಯ ನಿಯಮದ ಪ್ರಕಾರ ಜಂಟಿ ಸಮೀಕ್ಷೆ ನಡೆಸಿಲ್ಲ ಎಂದು ನ್ಯಾಯಮೂರ್ತಿ ಇ ಎಸ್ ಇಂದಿರೇಶ್ ಅವರ ಏಕಸದಸ್ಯ ಪೀಠ ಹೇಳಿದೆ.

"ಯಾವುದೇ ವ್ಯಕ್ತಿ ವಿರುದ್ಧ ಯಾವುದೇ ಆರೋಪ ಮಾಡುವುದಕ್ಕೂ ಮುನ್ನ ಇಲ್ಲಿ ಅರ್ಜಿದಾರರಾಗಿರುವ ಅವರನ್ನು ಒಳಗೊಂಡಂತೆ ಜಂಟಿ ಸಮೀಕ್ಷೆ ನಡೆಸಿ, ಆನಂತರ ಸಕ್ಷಮ ಪ್ರಾಧಿಕಾರವು ನಿರ್ಧಾರ ಕೈಗೊಳ್ಳಬೇಕು" ಎಂದು ಹೇಳಲಾಗಿದೆ.

ವಿವಿಎಂವಿಪಿಟಿ ಭೂಮಿ ಒತ್ತುವರಿ ಮಾಡಿಕೊಂಡಿದೆ ಎಂದು ಹೇಳುವುದಕ್ಕೂ ಮುನ್ನ ಕರ್ನಾಟಕ ಭೂ ಕಂದಾಯ ಕಾಯಿದೆ 1964ರ ಅಡಿ ನಿಯಮ ಪಾಲಿಸಬೇಕು. ಆದರೆ, ಹಾಲಿ ಪ್ರಕರಣದಲ್ಲಿ ಅದರ ಪಾಲನೆಯಾಗಿಲ್ಲ. ಹೀಗಾಗಿ, ಜುಲೈ 17ರ ಆದೇಶಕ್ಕೆ ತಡೆ ನೀಡಲಾಗಿದೆ ಎಂದು ನ್ಯಾಯಾಲಯ ಆದೇಶಿಸಿದೆ.

"ಆಕ್ಷೇಪಾರ್ಹ ಆದೇಶದಿಂದ ತಿಳಿಯುವುದೇನೆಂದರೆ ನಿಯಮವನ್ನು ಸಂಬಂಧಿತ ಪ್ರಾಧಿಕಾರ ಪಾಲಿಸಿಲ್ಲ. ಹೀಗಾಗಿ, 17.07.2026ರ ಆದೇಶಕ್ಕೆ ಮುಂದಿನ ವಿಚಾರಣೆವರೆಗೆ ತಡೆ ನೀಡಲಾಗಿದೆ" ಎಂದು ಜುಲೈ 31ರ ಆದೇಶದಲ್ಲಿ ಪೀಠ ವಿವರಿಸಿದೆ.

1981ರಲ್ಲಿ ವಿವಿಎಂವಿಪಿಟಿಯನ್ನು ಶ್ರೀ ಶ್ರೀ ರವಿಶಂಕರ್ ನೇತೃತ್ವದ ಆರ್ಟ್ ಆಫ್ ಲಿವಿಂಗ್ ಅಡಿ ಸ್ಥಾಪಿಸಲಾಗಿದ್ದು, ಸಂಸ್ಥೆ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಾಲಯ ವಿಚಾರಣೆ ನಡೆಸಿತು.

ಆರ್ಟ್ ಆಫ್ ಲಿವಿಂಗ್ ಸಂಸ್ಥೆ ಮತ್ತು ಅದರ ಸಂಬಂಧಿತ ಸಂಸ್ಥೆಗಳು ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿ ಸರ್ಕಾರಿ ಭೂಮಿ ಒತ್ತುವರಿ ಮಾಡಿಕೊಂಡಿರುವುದರ ಸಂಬಂಧಿತ ತನಿಖೆಗಾಗಿ ರಾಜ್ಯ ಸರ್ಕಾರವು ಎಸ್‌ಐಟಿ ರಚಿಸಿತ್ತು.

2025ರ ಅಕ್ಟೋಬರ್‌ನಲ್ಲಿ ಭೂ ದಾಖಲೆ ಸಹಾಯಕ ನಿರ್ದೇಶಕರ ಸಮೀಕ್ಷೆಯ ಪ್ರಕಾರ 290 ಎಕರೆ ಗೋಮಾಳವನ್ನು ಒತ್ತುವರಿ ಮಾಡಿಕೊಳ್ಳಲಾಗಿದೆ ಎಂದು ಸರ್ಕಾರ ವಾದಿಸಿದೆ.

ಟ್ರಸ್ಟ್ ಭೂಮಿ ಒತ್ತುವರಿ ಮಾಡಿಕೊಂಡಿದೆ ಎಂದು ಆರೋಪಿಸುವುದಕ್ಕೂ ಮುನ್ನ ನಿಯಮಗಳನ್ನು ಪಾಲಿಸಿಲ್ಲ ಎಂದು ವಿವಿಎಂವಿಪಿಟಿ ಹೈಕೋರ್ಟ್‌ನಲ್ಲಿ ಪ್ರಶ್ನಿಸಿದೆ.

ನ್ಯಾಯಾಲಯವು ರಾಜ್ಯ ಸರ್ಕಾರಕ್ಕೆ ಆಕ್ಷೇಪಣೆ ಸಲ್ಲಿಸಲು ಆದೇಶಿಸಿದ್ದು, ವಿಚಾರಣೆಯನ್ನು ಆಗಸ್ಟ್ 17ಕ್ಕೆ ಮುಂದೂಡಲಾಗಿದೆ. ವಿವಿಎಂವಿಪಿಟಿ ಪರವಾಗಿ ಹಿರಿಯ ವಕೀಲ ಶ್ರೀರಂಗ ಮತ್ತು ವಕೀಲೆ ಸುಮನಾ ನಾಗಾನಂದ್ ವಾದಿಸಿದರು.

# ಗುರು-ಶಿಷ್ಯ ಪರಂಪರೆಯ ವೈಭವ ಅನಾವರಣ

● ವಿಕ್ರಮ ವಾಹಿನಿ । ಬೆಂಗಳೂರು



ಭಾರತೀಯ ಸಂಸ್ಕೃತಿಯ ಜೀವನಾಡಿಯಾದ ಗುರು-ಶಿಷ್ಯ ಪರಂಪರೆಯ ಮಹತ್ವವನ್ನು ಮನೋಜ್ಞವಾಗಿ ಅನಾವರಣಗೊಳಿಸಿದ 'ಗುರುಭ್ಯೋ ನಮಃ' ರಂಗರೂಪವು ಪ್ರೇಕ್ಷಕರಿಂದ ಭಾರೀ ಮೆಚ್ಚುಗೆ ಗಳಿಸಿತು. ಶ್ರೀ ವಿವೇಕಾನಂದ ಕಲಾಕೇಂದ್ರವು ಉತ್ತರಹಳ್ಳಿಯ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಮಕ್ಕಳಿಗೆ ಹಾಗೂ ಶಿಕ್ಷಕರಿಗೆ ಮೌಲ್ಯ ಶಿಕ್ಷಣದ ಅರಿವು ಮೂಡಿಸುವ ಉದ್ದೇಶದಿಂದ ಈ ವಿಶೇಷ ಸಾಂಸ್ಕೃತಿಕ ಕಾರ್ಯಕ್ರಮವನ್ನು ಆಯೋಜಿಸಿತ್ತು.

ನಾಟಕದಲ್ಲಿ ಆದಿ ಶಂಕರಾಚಾರ್ಯರು, ಶ್ರೀರಾಮಾನುಜಾಚಾರ್ಯರು, ವಿದ್ಯಾರಣ್ಯರು, ಗುರು ವ್ಯಾಸರಾಯರು, ತಾಯಿ ಜೀಜಾಬಾಯಿ, ಶ್ರೀರಾಮಕೃಷ್ಣ ಪರಮಹಂಸರು ಸೇರಿದಂತೆ ಭಾರತದ ಇತಿಹಾಸವನ್ನು ರೂಪಿಸಿದ ಮಹಾನ್ ಗುರು-ಶಿಷ್ಯ ಸಂಬಂಧಗಳನ್ನು ಕಲಾತ್ಮಕವಾಗಿ ಚಿತ್ರಿಸಲಾಯಿತು.


ಗುರುಗಳ ಮಾರ್ಗದರ್ಶನದಿಂದ ಸಾಮಾನ್ಯ ವ್ಯಕ್ತಿಗಳು ರಾಷ್ಟ್ರನಿರ್ಮಾತೃಗಳು, ಸಮಾಜ ಸುಧಾರಕರು ಹಾಗೂ ಮಹಾನ್ ನಾಯಕರಾಗಿ ರೂಪುಗೊಂಡ ಸಂದೇಶವನ್ನು ಪರಿಣಾಮಕಾರಿಯಾಗಿ ಬಿಂಬಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಎಸ್‌ಡಿಎಂಸಿ ಉಪಾಧ್ಯಕ್ಷ ರಮೇಶ್ ರಾಜು, ಕಲಾವಿದರ ಅಭಿನಯ, ಸಂಗೀತ, ಸಂಭಾಷಣೆ ಹಾಗೂ ನಿರೂಪಣೆ ಅತ್ಯಂತ ಪರಿಣಾಮಕಾರಿಯಾಗಿದ್ದು, ರಾಷ್ಟ್ರದ ಬಲವು ಗುರುಗಳ ಬೋಧಿಸಿದ ಮೌಲ್ಯಗಳ ಮೇಲೆ ನಿರ್ಮಾಣವಾಗುತ್ತದೆ ಎಂಬ ಸಂದೇಶವನ್ನು ಯಶಸ್ವಿಯಾಗಿ ತಲುಪಿಸಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸುಮಾರು 2,000ಕ್ಕೂ ಹೆಚ್ಚು ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಪೋಷಕರು ಕಾರ್ಯಕ್ರಮದಲ್ಲಿ ಭಾಗವಹಿಸಿ ರಂಗರೂಪವನ್ನು ವೀಕ್ಷಿಸಿದರು. ಶ್ರೀ ವಿವೇಕಾನಂದ ಕಲಾಕೇಂದ್ರದ ಗೌರವ ಕಾರ್ಯದರ್ಶಿ ಡಾ. ವಿ. ನಾಗರಾಜ್ ಹಾಗೂ ನೃತ್ಯ ಸಂಯೋಜಕಿ ಡಾ. ಶ್ವೇತಾ ಅವರ ನಿರ್ದೇಶನ ಮತ್ತು ಸಂಯೋಜನೆಗೆ ವ್ಯಾಪಕ ಪ್ರಶಂಸೆ ವ್ಯಕ್ತವಾಯಿತು.

ಕಾರ್ಯಕ್ರಮಕ್ಕೆ ಬೆಂಬಲ ನೀಡಿದ ಕರ್ನಾಟಕ ಪಬ್ಲಿಕ್ ಶಾಲೆಯ ಅಧ್ಯಕ್ಷ ಹಾಗೂ ಶಾಸಕ ಎಂ. ಕೃಷ್ಣಪ್ಪ, ಎಸ್‌ಡಿಎಂಸಿ ಪದಾಧಿಕಾರಿಗಳು, ಶಾಲಾ ಆಡಳಿತ ಮಂಡಳಿ, ಭಾರತ ಸರ್ಕಾರದ ಸಂಸ್ಕೃತಿ ಸಚಿವಾಲಯ ಹಾಗೂ ಕರ್ನಾಟಕ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಆಯೋಜಕರು ಕೃತಜ್ಞತೆ ಸಲ್ಲಿಸಿದರು.

## ಫ್ಯೂಷನ್ ಕ್ಲಾಸ್‌ರೂಮ್ ಎಡುಟೆಕ್ ಐಪಿಒ ಜುಲೈ 31ರಿಂದ ಆರಂಭ



● ವಿಕ್ರಮ ವಾಹಿನಿ । ಮುಂಬೈ

ಭಾರತದ ವೇಗವಾಗಿ ಬೆಳೆಯುತ್ತಿರುವ ಹೈಬ್ರಿಡ್ ಎಡ್‌ಟೆಕ್ ವೇದಿಕೆಗಳಲ್ಲಿ ಒಂದಾದ ಫ್ಯೂಷನ್ ಕ್ಲಾಸ್‌ರೂಮ್ ಎಡುಟೆಕ್ ಲಿಮಿಟೆಡ್ ತನ್ನ ಆರಂಭಿಕ ಸಾರ್ವಜನಿಕ ಷೇರು ಮಾರಾಟಕ್ಕೆ ಸಜ್ಜಾಗಿದೆ.

ಕಂಪನಿಯ ಐಪಿಒ ಜುಲೈ 31, 2026ರ ಶುಕ್ರವಾರ ಆರಂಭವಾಗಲಿದ್ದು, ಆಗಸ್ಟ್ 4, 2026ರ ಮಂಗಳವಾರ ಮುಕ್ತಾಯಗೊಳ್ಳಲಿದೆ. ಆಂಕರ್ ಹೂಡಿಕೆದಾರರಿಗೆ ಷೇರು ಹಂಚಿಕೆ ಪ್ರಕ್ರಿಯೆ ಜುಲೈ 30ರಂದು ಆರಂಭವಾಗಲಿದೆ. ಐಪಿಒ ಮೂಲಕ ಒಟ್ಟು 24,55,200 ಇಕ್ವಿಟಿ ಷೇರುಗಳನ್ನು ಮಾರಾಟಕ್ಕೆ ಇಡಲಾಗಿದ್ದು, ಪ್ರತಿ ಷೇರಿನ ಮುಖಬೆಲೆ ರೂ.10 ಆಗಿದೆ. ಪ್ರತಿ ಇಕ್ವಿಟಿ ಷೇರಿಗೆ ರೂ.151ರಿಂದ ರೂ.159ರವರೆಗೆ ಬೆಲೆ ನಿಗದಿಪಡಿಸಲಾಗಿದೆ.

ಹೂಡಿಕೆದಾರರು ಕನಿಷ್ಠ 1,600 ಷೇರುಗಳ ಒಂದು ಲಾಟ್‌ಗೆ ಅರ್ಜಿ ಸಲ್ಲಿಸಬಹುದಾಗಿದ್ದು, ನಂತರ 800 ಷೇರುಗಳ ಗುಣಾಕಾರದಲ್ಲಿ ಹೆಚ್ಚುವರಿ ಬಿಡ್ ಸಲ್ಲಿಸಬಹುದಾಗಿದೆ. ಕಂಪನಿಯು ರೂ.159ರ ಗರಿಷ್ಠ ಬೆಲೆ ದರದಲ್ಲಿ ಆರು ಆಂಕರ್ ಹೂಡಿಕೆದಾರರಿಗೆ 6,96,800 ಇಕ್ವಿಟಿ ಷೇರುಗಳನ್ನು ಹಂಚಿಕೆ ಮಾಡಿದ್ದು, ಇದರ ಒಟ್ಟು ಮೌಲ್ಯ ಸುಮಾರು ರೂ.11.07 ಕೋಟಿಯಾಗಿದೆ. ಆಂಕರ್ ಹೂಡಿಕೆದಾರರಲ್ಲಿ ಪ್ರಮುಖ ಸಾಂಸ್ಥಿಕ ಹೂಡಿಕೆದಾರರು ಭಾಗವಹಿಸಿದ್ದಾರೆ.

ಫ್ಯೂಷನ್ ಕ್ಲಾಸ್‌ರೂಮ್ ಎಡುಟೆಕ್ ಲಿಮಿಟೆಡ್ ಕೆ-12 ಶಿಕ್ಷಣ, ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ, ವೃತ್ತಿಪರ ಕೌಶಲ್ಯಾಭಿವೃದ್ಧಿ ಹಾಗೂ ಕೃತಕ ಬುದ್ಧಿಮತ್ತೆ ಮತ್ತು ಯಂತ್ರ ಕಲಿಕೆ ಆಧಾರಿತ ಕಲಿಕಾ ಪರಿಹಾರಗಳನ್ನು ಒದಗಿಸುತ್ತಿದೆ.

# ಮತ್ತೊಂದು ಕೆಟ್ಟ ಸಂಪ್ರದಾಯಕ್ಕೆ ನಾಂದಿ ಹಾಡಿದ ಕಾಂಗ್ರೆಸ್ ಪಕ್ಷ: ಸುರೇಶ್ ಕುಮಾರ್

● ವಿಕ್ರಮ ವಾಹಿನಿ । ಬೆಂಗಳೂರು



ಕಾಂಗ್ರೆಸ್ ಪಕ್ಷ ತನ್ನ ಅಧಿಕೃತ ಪಕ್ಷದ ಪತ್ರ ಶೀರ್ಷಿಕೆಯಲ್ಲಿ ಸಾಂವಿಧಾನಿಕ ಹುದ್ದೆಗಳ ಹೆಸರನ್ನು ಬಳಸಿರುವುದು ಅತ್ಯಂತ ಆಕ್ಷೇಪಾರ್ಹ. ಇಂತಹ ನಡೆ ಈ ಹುದ್ದೆಗಳ ಪಕ್ಷಾತೀತ ಸ್ವರೂಪಕ್ಕೆ ಧಕ್ಕೆ ತರುವುದಲ್ಲದೆ, ಅವುಗಳ ಘನತೆ ಮತ್ತು ಗೌರವಕ್ಕೂ ಕಳಂಕ ತರುವ ಪ್ರಯತ್ನವಾಗಿದೆ ಎಂದು ಶಾಸಕ ಎಸ್.ಸುರೇಶ್ ಕುಮಾರ್ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು ವಿಧಾನಸಭೆಯ ಸಭಾಧ್ಯಕ್ಷರು, ಉಪಸಭಾಧ್ಯಕ್ಷರು ಹಾಗೂ ವಿಧಾನ ಪರಿಷತ್ತಿನ ಸಭಾಪತಿಗಳು ಮತ್ತು ಉಪಸಭಾಪತಿ ಹುದ್ದೆಗಳು ಯಾವುದೇ ರಾಜಕೀಯ ಪಕ್ಷದ ವ್ಯಾಪ್ತಿಗೆ ಸೀಮಿತವಾಗದ, ಅತ್ಯುನ್ನತ ಸಾಂವಿಧಾನಿಕ ಸ್ಥಾನಗಳಾಗಿವೆ. ಈ ಹುದ್ದೆಗಳು ತಮ್ಮದೇ ಆದ ಘನತೆ, ಗೌರವ, ನಿಷ್ಪಕ್ಷಪಾತ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಪ್ರತಿನಿಧಿಸುವ ಪರಂಪರೆಯನ್ನು ಹೊಂದಿವೆ ಎಂದು ಅವರು ಪ್ರತಿಪಾದಿಸಿದ್ದಾರೆ.

ಆಯ್ಕೆಯಾಗಬೇಕಿರುವ ಸಭಾಧ್ಯಕ್ಷರ, ಉಪಸಭಾಧ್ಯಕ್ಷರ, ಸಭಾಪತಿಗಳ ಹಾಗೂ ಉಪ ಸಭಾಪತಿಗಳ ಹೆಸರುಗಳನ್ನು ಆಳುವ ಪಕ್ಷದ ಲೆಟರ್ ಹೆಡ್ ನಲ್ಲಿ ದೆಹಲಿಯಿಂದಲೇ ಕಳುಹಿಸುತ್ತಿರುವುದು ಇದೇ ಮೊದಲ ಬಾರಿ. ಇದು ಕೇವಲ ಸಂಸದೀಯ ಸಂಪ್ರದಾಯಗಳ ಉಲ್ಲಂಘನೆಯಷ್ಟೇ ಅಲ್ಲ; ಸಾಂವಿಧಾನಿಕ ಮೌಲ್ಯಗಳು ಮತ್ತು ಪ್ರಜಾಪ್ರಭುತ್ವದ ಮೂಲಭೂತ ತತ್ವಗಳ ಮೇಲಿನ ನಿರ್ಲಕ್ಷ್ಯದ ಪ್ರತೀಕವಾಗಿದೆ ಎಂದು ಕಿಡಿ ಕಾರಿದ್ದಾರೆ.

ಬಾಯಲ್ಲಿ ಸಂವಿಧಾನದ ರಕ್ಷಣೆ ಎಂದು ಹೇಳಿಕೊಂಡು, ಆಚರಣೆಯಲ್ಲಿ ಸಾಂವಿಧಾನಿಕ ಸಂಸ್ಥೆಗಳು ಮತ್ತು ಉನ್ನತ ಹುದ್ದೆಗಳನ್ನು ಪಕ್ಷದ ರಾಜಕೀಯ ಉದ್ದೇಶಗಳಿಗೆ ಬಳಸಿಕೊಳ್ಳುವ ಕಾಂಗ್ರೆಸ್‌ನ ದ್ವಂದ್ವ ನೀತಿ ಮತ್ತೊಮ್ಮೆ ಬಹಿರಂಗವಾಗಿದೆ ಎಂದು ಎಸ್. ಸುರೇಶ್ ಕುಮಾರ್ ಟೀಕಿಸಿದ್ದಾರೆ.



**ರಾಜ್ಯ ಸಚಿವ ಸಂಪುಟಕ್ಕೆ ಸೇರ್ಪಡೆಯಾದ ಬಳಿಕ ಸಚಿವ ಜಮೀರ್ ಅಹಮದ್ ಖಾನ್ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿ ಸಚಿವ ಸ್ಥಾನ ನೀಡಿದ ಹಿನ್ನೆಲೆಯಲ್ಲಿ ಕೃತಜ್ಞತೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಉಭಯ ನಾಯಕರು ರಾಜ್ಯದ ಅಭಿವೃದ್ಧಿ, ಸಚಿವ ಸಂಪುಟದ ಜವಾಬ್ದಾರಿಗಳು ಹಾಗೂ ಮುಂದಿನ ಆಡಳಿತಾತ್ಮಕ ಕಾರ್ಯಗಳ ಕುರಿತು ಸಂಕ್ಷಿಪ್ತವಾಗಿ ಚರ್ಚಿಸಿದರು. ಈ ವೇಳೆ ಪರಿಷತ್ ಸದಸ್ಯ ವಿನಯ್ ಕಾರ್ತಿಕ್ ಉಪಸ್ಥಿತರಿದ್ದರು.**

## ರಾಷ್ಟ್ರೀಯ ಸ್ಕೇಟಿಂಗ್ ಚಾಂಪಿಯನ್‌ಶಿಪ್: 2 ಪದಕ ಸಾಧನೆಗೈದ ಅಹೀಶ್



● ವಿಕ್ರಮ ವಾಹಿನಿ । ಬೆಂಗಳೂರು

ಪಾಂಡಿಚೇರಿಯಲ್ಲಿ ಜುಲೈ 30ರಿಂದ ಆಗಸ್ಟ್ 2ರವರೆಗೆ ನಡೆದ ನ್ಯಾಷನಲ್ ಓಪನ್ ಚಾಂಪಿಯನ್‌ಶಿಪ್ ಸ್ಕೇಟಿಂಗ್ ಸ್ಪರ್ಧೆಯಲ್ಲಿ ಬೆಂಗಳೂರಿನ 6ನೇ ತರಗತಿ ವಿದ್ಯಾರ್ಥಿ ಅಹೀಶ್ ಎಂ. ಮಠಂ ಗಮನಾರ್ಹ ಸಾಧನೆ ಮಾಡಿದ್ದಾರೆ.

ಸ್ಪರ್ಧೆಯ 500 ಮೀಟರ್ ಸ್ಕೇಟಿಂಗ್ ವಿಭಾಗದಲ್ಲಿ ಬೆಳ್ಳಿ ಪದಕ ಹಾಗೂ 1000 ಮೀಟರ್ ಸ್ಕೇಟಿಂಗ್ ವಿಭಾಗದಲ್ಲಿ ಕಂಚಿನ ಪದಕ ಗೆದ್ದು ರಾಜ್ಯಕ್ಕೆ ಕೀರ್ತಿ ತಂದಿದ್ದಾರೆ. ರಾಷ್ಟ್ರೀಯ ಮಟ್ಟದಲ್ಲಿ ಎರಡು ಪದಕಗಳನ್ನು ಗೆದ್ದಿರುವ ಅಹೀಶ್ ಅವರ ಸಾಧನೆಗೆ ಕ್ರೀಡಾಭಿಮಾನಿಗಳು, ಶಿಕ್ಷಕರು ಹಾಗೂ ಸ್ಥಳೀಯರು ಅಭಿನಂದನೆ ಸಲ್ಲಿಸಿದ್ದಾರೆ.

ಅಹೀಶ್ ಎಂ. ಮಠಂ ಅವರು ಗ್ರೇಟರ್ ಬೆಂಗಳೂರು ಮಹಾನಗರದ ಉತ್ತರಹಳ್ಳಿ ಸಮೀಪದ ಇಟ್ಟಮಡು ನಿವಾಸಿಯಾಗಿದ್ದು, ತಮ್ಮ ಪ್ರತಿಭೆ ಮತ್ತು ನಿರಂತರ ಅಭ್ಯಾಸದ ಮೂಲಕ ಈ ಸಾಧನೆ ಮಾಡಿದ್ದಾರೆ. ಅವರ ಈ ಸಾಧನೆ ಮುಂದಿನ ದಿನಗಳಲ್ಲಿ ಇನ್ನಷ್ಟು ಉನ್ನತ ಮಟ್ಟದ ಸ್ಪರ್ಧೆಗಳಲ್ಲಿ ಯಶಸ್ಸು ಸಾಧಿಸಲು ಪ್ರೇರಣೆಯಾಗಲಿ ಎಂದು ಗಣ್ಯರು ಶುಭ ಹಾರೈಸಿದ್ದಾರೆ. ಸಣ್ಣ ವಯಸ್ಸಿನಲ್ಲೇ ನಿರಂತರ ಅಭ್ಯಾಸ, ಶಿಸ್ತು ಮತ್ತು ಸಮರ್ಪಣೆಯಿಂದ ರಾಷ್ಟ್ರಮಟ್ಟದಲ್ಲಿ ಪದಕಗಳನ್ನು ಗೆದ್ದಿರುವುದು ಗಮನಾರ್ಹ ಸಾಧನೆಯಾಗಿದ್ದು, ಮುಂದಿನ ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಸ್ಕೇಟಿಂಗ್ ಸ್ಪರ್ಧೆಗಳಲ್ಲಿಯೂ ಅವರು ಇನ್ನಷ್ಟು ಯಶಸ್ಸು ಸಾಧಿಸಿ ರಾಜ್ಯ ಹಾಗೂ ದೇಶಕ್ಕೆ ಕೀರ್ತಿ ತಂದುಕೊಡಲಿ ಎಂದು ಕ್ರೀಡಾ ವಲಯದ ಗಣ್ಯರು ಮತ್ತು ಪೋಷಕರು ಶುಭ ಹಾರೈಸಿದ್ದಾರೆ.

# 'ಎಲ್ಲರಿಗೂ ಒಂದಲ್ಲಾ ಒಂದು ಅವಕಾಶ ಕಲ್ಪಿಸುತ್ತೇವೆ, ತಾಳ್ಮೆಯಿಂದ ಇರಿ'

● ವಿಕ್ರಮ ವಾಹಿನಿ । ಬೆಂಗಳೂರು



ಸಚಿವ ಸ್ಥಾನ ಆಕಾಂಕ್ಷಿಗಳಲ್ಲಿ ತಾಳ್ಮೆ ವಹಿಸುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮನವಿ ಮಾಡಿದ್ದು, ಪಕ್ಷ ಎಲ್ಲರಿಗೂ ಒಂದಲ್ಲಾ ಒಂದು ಸಂದರ್ಭದಲ್ಲಿ ಅವಕಾಶ ಕಲ್ಪಿಸುತ್ತದೆ ಎಂದು ಹೇಳಿದರು.

ಸದಾಶಿವನಗರ ನಿವಾಸದ ಬಳಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೂತನ ಸಚಿವರ ಪಟ್ಟಿಯನ್ನು ರಾಜ್ಯಪಾಲರಿಗೆ ರವಾನಿಸಲಾಗಿದೆ. ಕಾಂಗ್ರೆಸ್‌ನಲ್ಲಿ ಸಚಿವ ಸ್ಥಾನಕ್ಕೆ ಅರ್ಹರಾದ ಅನೇಕ ಶಾಸಕರು ಇದ್ದರೂ, ಅಂತಿಮ ತೀರ್ಮಾನವನ್ನು ಪಕ್ಷವೇ ಕೈಗೊಳ್ಳುತ್ತದೆ ಎಂದರು.

"2004ರಲ್ಲಿ ನನ್ನನ್ನೂ ಸಚಿವ ಸಂಪುಟಕ್ಕೆ ಸೇರಿಸಿರಲಿಲ್ಲ. ಬಳಿಕ ಸಿದ್ದರಾಮಯ್ಯ ಅವರ ಸರ್ಕಾರದ ಆರಂಭದಲ್ಲೂ ನನಗೆ ಅವಕಾಶ ಸಿಕ್ಕಿರಲಿಲ್ಲ. ಆಗ ನಾನು ತಾಳ್ಮೆಯಿಂದ ಕಾಯ್ದುಕೊಂಡೆ. ಆ ತಾಳ್ಮೆಯೇ ಇಂದು ನನ್ನನ್ನು ಈ ಸ್ಥಾನಕ್ಕೆ ತಂದು ನಿಲ್ಲಿಸಿದೆ. ಆದ್ದರಿಂದ ಶಾಸಕರು ಕೂಡ ತಾಳ್ಮೆಯಿಂದ ಇರಬೇಕು. ಎಲ್ಲರಿಗೂ ಸೂಕ್ತ ಸಮಯದಲ್ಲಿ ಅವಕಾಶ ದೊರೆಯಲಿದೆ" ಎಂದು ಶಿವಕುಮಾರ್ ಹೇಳಿದರು.

# ನೀಟ್ ಪ್ರಶ್ನೆಪತ್ರಿಕೆ ಸೋರಿಕೆ: ಪರೀಕ್ಷಾ ಭದ್ರತೆ ಬಿಗಿಗೊಳಿಸಲು ಎನ್‌ಟಿಎ ಕ್ರಮ

● ವಿಕ್ರಮ ವಾಹಿನಿ । ನವದೆಹಲಿ




ನೀಟ್ ಯುಜಿ 2026ರ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ಹಿನ್ನೆಲೆಯಲ್ಲಿ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್‌ಟಿಎ) ಪರೀಕ್ಷಾ ಭದ್ರತಾ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲು ಮುಂದಾಗಿದೆ. ಭವಿಷ್ಯದಲ್ಲಿ ಇಂತಹ ಲೋಪಗಳು ಮರುಕಳಿಸದಂತೆ ವ್ಯಾಪಕ ಭದ್ರತಾ ಸುಧಾರಣೆಗಳನ್ನು ಕೈಗೊಳ್ಳಲು ಸಂಸ್ಥೆ ಮುಂದಾಗಿದೆ.

ಪರೀಕ್ಷಾ ಭದ್ರತಾ ವ್ಯವಸ್ಥೆಯಲ್ಲಿ ಪ್ರಮುಖ ಬದಲಾವಣೆಗಳನ್ನು ತರಲು ಮುಂದಾಗಿರುವ ಎನ್‌ಟಿಎ, ತನ್ನ ಪ್ರಧಾನ ಕಚೇರಿ, ಪ್ರಾದೇಶಿಕ ಕಚೇರಿಗಳು ಹಾಗೂ ಇತರ ಸೂಕ್ಷ್ಮ ಸ್ಥಳಗಳಲ್ಲಿ ಕಠಿಣ ಭದ್ರತಾ ವ್ಯವಸ್ಥೆ ಕಲ್ಪಿಸಲು ವೃತ್ತಿಪರ ಸಂಸ್ಥೆಯೊಂದನ್ನು ನೇಮಿಸಿಕೊಳ್ಳಲು ಸುಮಾರು 7.5 ಕೋಟಿ ಮೌಲ್ಯದ ಟೆಂಡರ್ ಆಹ್ವಾನಿಸಿದೆ.

ಈ ಕ್ರಮದ ಮೂಲಕ ಪರೀಕ್ಷಾ ವ್ಯವಸ್ಥೆಯ ವಿಶ್ವಾಸಾರ್ಹತೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶ ಹೊಂದಲಾಗಿದೆ.

ವೃತ್ತಿಪರ ಸಂಸ್ಥೆಯೊಂದಿಗೆ ಎರಡು ವರ್ಷಗಳ ಅವಧಿಗೆ ಗುತ್ತಿಗೆ ಒಪ್ಪಂದ ಮಾಡಿಕೊಳ್ಳಲು ಉದ್ದೇಶಿಸಲಾಗಿದ್ದು, ಸಂಸ್ಥೆಯ ಕಾರ್ಯಕ್ಷಮತೆಯನ್ನು ಆಧರಿಸಿ ಮತ್ತೊಂದು ವರ್ಷಕ್ಕೆ ಗುತ್ತಿಗೆ ವಿಸ್ತರಿಸುವ ಅವಕಾಶವನ್ನೂ ಕಲ್ಪಿಸಲಾಗಿದೆ. ಟೆಂಡರ್‌ಗೆ ಅರ್ಜಿ ಸಲ್ಲಿಸಲು ಆಗಸ್ಟ್ 17ರವರೆಗೆ ಅವಕಾಶವಿದ್ದು, ಅದೇ ದಿನ ತಾಂತ್ರಿಕ ಬಿಡ್‌ಗಳನ್ನು ತೆರೆಯಲು ನಿರ್ಧರಿಸಲಾಗಿದೆ.

ಇದರ ಜೊತೆಗೆ, ಹೌಸ್‌ಕೀಪಿಂಗ್ ಮತ್ತು ಭದ್ರತಾ ಮುದ್ರಣ ಸೇವೆಗಳಿಗೆ ಪ್ರತ್ಯೇಕವಾಗಿ ಬಿಡ್‌ಗಳನ್ನು ಆಹ್ವಾನಿಸಲಾಗುತ್ತಿದೆ. ಈ ಸೇವೆಗಳಿಗೆ ಸರ್ಕಾರಿ ಇ-ಮಾರುಕಟ್ಟೆ ವ್ಯವಸ್ಥೆಯ ಮೂಲಕ ಪ್ರತ್ಯೇಕ ಟೆಂಡರ್ ಪ್ರಕ್ರಿಯೆ ನಡೆಯಲಿದೆ.

ಈ ಬಾರಿ ಎನ್‌ಟಿಎ ಸಾಂಪ್ರದಾಯಿಕವಾಗಿ ಅತ್ಯಂತ ಕಡಿಮೆ ಬಿಡ್ ಸಲ್ಲಿಸಿದ ಸಂಸ್ಥೆಯನ್ನು ಆಯ್ಕೆ ಮಾಡುವ ಪದ್ಧತಿಯಿಂದ ಹೊರಬಂದು, ಗುಣಮಟ್ಟ ಮತ್ತು ವೆಚ್ಚ ಎರಡನ್ನೂ ಆಧರಿಸಿದ ಆಯ್ಕೆ ವಿಧಾನವನ್ನು ಅಳವಡಿಸಿಕೊಂಡಿದೆ.

ಇದರ ಅನ್ವಯ ತಾಂತ್ರಿಕ ಸಾಮರ್ಥ್ಯಕ್ಕೆ ಶೇ.70ರಷ್ಟು ಹಾಗೂ ಆರ್ಥಿಕ ಬಿಡ್‌ಗೆ ಶೇ.30ರಷ್ಟು ಮಹತ್ವ ನೀಡಲಾಗುತ್ತದೆ.

ತಾಂತ್ರಿಕ ಮೌಲ್ಯಮಾಪನದಲ್ಲಿ ಕನಿಷ್ಠ 70 ಅಂಕಗಳನ್ನು ಗಳಿಸುವ ಸಂಸ್ಥೆಗಳು ಮಾತ್ರ ಮುಂದಿನ ಆರ್ಥಿಕ ಮೌಲ್ಯಮಾಪನ ಹಂತಕ್ಕೆ ಅರ್ಹತೆ ಪಡೆಯಲಿವೆ.

## 'ರಾಜೀನಾಮೆ ಕೊಟ್ಟರೆ ಅಂಗೀಕರಿಸಿ'! ಅಸಮಾಧಾನಿತ ಶಾಸಕರಿಗೆ ಹೈಕಮಾಂಡ್ ಖಡಕ್ ಸಂದೇಶ

1ನೇ ಪುಟದಿಂದ

ಇದೇ ವೇಳೆ ಸಾಗರ ಶಾಸಕ ಬೇಳೂರು ಗೋಪಾಲಕೃಷ್ಣ ಕೂಡ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದು, "ಶಾಸಕ ಸ್ಥಾನ ಹಾಗೂ ನಿಗಮ-ಮಂಡಳಿ ಹುದ್ದೆ ಎರಡಕ್ಕೂ ರಾಜೀನಾಮೆ ನೀಡುತ್ತೇನೆ" ಎಂದು ಘೋಷಿಸಿದ್ದಾರೆ.

ಭದ್ರಾವತಿ ಶಾಸಕ ಬಿ.ಕೆ. ಸಂಗಮೇಶ್ ಸಹ ಸಚಿವ ಸ್ಥಾನ ಸಿಗದಿದ್ದಕ್ಕೆ ಬೇಸರ ವ್ಯಕ್ತಪಡಿಸಿ, "30-40 ವರ್ಷಗಳಿಂದ ಪಕ್ಷಕ್ಕಾಗಿ ದುಡಿದಿದ್ದೇನೆ.

ಬಿಜೆಪಿ 50 ಕೋಟಿ ರೂಪಾಯಿ ಆಮಿಷ ಒಡ್ಡಿದರೂ ಪಕ್ಷ ಬಿಟ್ಟಿಲ್ಲ. ಆದರೆ ಸಚಿವ ಸ್ಥಾನ ನೀಡುವುದಾಗಿ ಭರವಸೆ ನೀಡಿ ಕೊನೆಗೆ ನಿರಾಸೆಗೊಳಿಸಿದ್ದಾರೆ. ನನ್ನ ಕ್ಷೇತ್ರದ ಜನರೊಂದಿಗೆ ಸಭೆ ನಡೆಸಿ ಅವರ ಅಭಿಪ್ರಾಯದಂತೆ ರಾಜೀನಾಮೆ ಕುರಿತು ನಿರ್ಧಾರ ಕೈಗೊಳ್ಳುತ್ತೇನೆ" ಎಂದು ಹೇಳಿದ್ದಾರೆ.

ಸಚಿವ ಸಂಪುಟ ವಿಸ್ತರಣೆ ಮುಗಿದರೂ ಕಾಂಗ್ರೆಸ್‌ನೊಳಗಿನ ಅಸಮಾಧಾನ ಶಮನವಾಗುವ ಲಕ್ಷಣಗಳು ಕಾಣುತ್ತಿಲ್ಲ. ರಾಜೀನಾಮೆ ಬೆದರಿಕೆ, ಕಾರ್ಯಕರ್ತರ ಪ್ರತಿಭಟನೆ ಹಾಗೂ ಹೈಕಮಾಂಡ್‌ನ ಕಠಿಣ ಸಂದೇಶದ ನಡುವೆ ಆಡಳಿತ ಪಕ್ಷದ ಆಂತರಿಕ ಬಿಕ್ಕಟ್ಟು ಇನ್ನಷ್ಟು ತೀವ್ರಗೊಳ್ಳುವ ಸಾಧ್ಯತೆಗಳು ಗೋಚರಿಸುತ್ತಿವೆ.

# ನೀಟ್ ಎಂಬಿಬಿಎಸ್ ಕೋಟಾ: ಮೊದಲ ಸುತ್ತಿನ ಕೌನ್ಸೆಲಿಂಗ್ ಮಂಗಳವಾರದಿಂದ ಪ್ರಾರಂಭ

● ವಿಕ್ರಮ ವಾಹಿನಿ | ಬೆಂಗಳೂರು

ಅಖಿಲ ಭಾರತ ಕೋಟಾದಡಿ ಎಂಬಿಬಿಎಸ್ ಮತ್ತು ಇತರ ವೈದ್ಯಕೀಯ ಕೋರ್ಸ್‌ಗಳ ಪ್ರವೇಶಕ್ಕಾಗಿ ಮೊದಲ ಸುತ್ತಿನ ಕೌನ್ಸೆಲಿಂಗ್ ಪ್ರಕ್ರಿಯೆ ಮಂಗಳವಾರದಿಂದ ಪ್ರಾರಂಭವಾಗಲಿದೆ.

2026–27 ಬ್ಯಾಚ್‌ನ ಶೈಕ್ಷಣಿಕ ಅವಧಿ ಸೆಪ್ಟೆಂಬರ್ 8 ರಂದು ಆರಂಭವಾಗಲಿದೆ. ವೈದ್ಯಕೀಯ ಸಮಾಲೋಚನಾ ಸಮಿತಿ – ಎಂಸಿಸಿ ಬಿಡುಗಡೆ ಮಾಡಿದ ವೇಳಾಪಟ್ಟಿಯ ಪ್ರಕಾರ, ಡೀಮ್ಡ್ ಮತ್ತು ಕೇಂದ್ರೀಯ ವಿಶ್ವವಿದ್ಯಾಲಯಗಳಿಗೆ ಮೊದಲ ಸುತ್ತಿನ ಕೌನ್ಸೆಲಿಂಗ್ ಆಗಸ್ಟ್ 4 ರಿಂದ ಆಗಸ್ಟ್ 17ರ ವರೆಗೆ ನಡೆಯಲಿದೆ.

ಕಾಲೇಜಿಗೆ ದಾಖಲಾಗಲು ಕೊನೆಯ ದಿನಾಂಕ ಆಗಸ್ಟ್ 22 ಆಗಿರುತ್ತದೆ. ಎರಡನೇ ಸುತ್ತಿನ ಕೌನ್ಸೆಲಿಂಗ್ ಆಗಸ್ಟ್ 24 ರಿಂದ ಸೆಪ್ಟೆಂಬರ್ 2ರ ವರೆಗೆ ನಡೆಯಲಿದೆ. ನಂತರ ಮೂರನೇ ಸುತ್ತಿನ ಕೌನ್ಸೆಲಿಂಗ್ ಸೆಪ್ಟೆಂಬರ್ 10 ರಿಂದ ಸೆಪ್ಟೆಂಬರ್ 18ರ ವರೆಗೆ ಜರುಗಲಿದೆ. ಅಂತಿಮ ಸುತ್ತು ಸೆಪ್ಟೆಂಬರ್ 28 ರಿಂದ ಅಕ್ಟೋಬರ್ 3ರ ವರೆಗೆ ನಡೆಯಲಿದೆ. ಈ ಸುತ್ತಿನಲ್ಲಿ ಕಾಲೇಜಿಗೆ ದಾಖಲಾಗಲು ಕೊನೆಯ ದಿನಾಂಕ ಅಕ್ಟೋಬರ್ 10 ಆಗಿದೆ.

ರಾಜ್ಯ ಕೋಟಾದ ಸೀಟುಗಳಿಗೆ, ಮೊದಲ ಸುತ್ತಿನ ಕೌನ್ಸೆಲಿಂಗ್ ಆಗಸ್ಟ್ 13 ರಿಂದ ಆಗಸ್ಟ್ 22ರ ವರೆಗೆ ನಡೆಯಲಿದೆ. ಅಭ್ಯರ್ಥಿಗಳು ಆಗಸ್ಟ್ 28 ರೊಳಗೆ ಕಾಲೇಜಿಗೆ ದಾಖಲಾಗಬೇಕಾಗುತ್ತದೆ. ಎರಡನೇ ಸುತ್ತು ಆಗಸ್ಟ್ 31 ರಿಂದ ಸೆಪ್ಟೆಂಬರ್ 8ರ ವರೆಗೆ ಮತ್ತು ಮೂರನೇ ಸುತ್ತು ಸೆಪ್ಟೆಂಬರ್ 16 ರಿಂದ ಸೆಪ್ಟೆಂಬರ್ 26ರ ವರೆಗೆ ನಡೆಯಲಿದೆ. ರಾಜ್ಯ ಕೋಟಾದ ಸೀಟುಗಳಿಗೆ ಅಂತಿಮ ಸುತ್ತು ಅಕ್ಟೋಬರ್ 3 ರಿಂದ ಅಕ್ಟೋಬರ್ 5ರ ವರೆಗೆ ನಡೆಯಲಿದೆ.

# ಕೇರಳದಲ್ಲಿ ಧಾರಾಕಾರ ಮಳೆ: ವಿವಿಧ ಅವಘಡಗಳಲ್ಲಿ 15 ಮಂದಿ ಸಾವು, 7 ಜನ ನಾಪತ್ತೆ

● ವಿಕ್ರಮ ವಾಹಿನಿ | ತಿರುವನಂತಪುರಂ (ಕೇರಳ)

ಕೇರಳದಲ್ಲಿ ಕಳೆದ ಕೆಲವು ದಿನಗಳಿಂದ ಸುರಿಯುತ್ತಿರುವ ಧಾರಾಕಾರ ಮಳೆ ಹಾಗೂ ಪ್ರವಾಹದಿಂದ ಸಂಭವಿಸಿದ ವಿವಿಧ ಅವಘಡಗಳಲ್ಲಿ ಮೃತಪಟ್ಟವರ ಸಂಖ್ಯೆ 15ಕ್ಕೆ ಏರಿಕೆಯಾಗಿದ್ದು, 7 ಮಂದಿ ನಾಪತ್ತೆಯಾಗಿದ್ದಾರೆ. ರಾಜ್ಯಾದ್ಯಂತ 316 ಪರಿಹಾರ ಶಿಬಿರಗಳನ್ನು ತೆರೆಯಲಾಗಿದ್ದು, 11,018 ಮಂದಿಗೆ ಆಶ್ರಯ ಕಲ್ಪಿಸಲಾಗಿದೆ.

ಕೊಟ್ಟಾಯಂ, ಮಲಪ್ಪುರಂ, ಎರ್ನಾಕುಲಂ, ಕೊಲ್ಲಂ, ಇಡುಕ್ಕಿ, ಕಣ್ಣೂರು ಹಾಗೂ ಕೋಳಿಕೋಡ್ ಜಿಲ್ಲೆಗಳಲ್ಲಿ ಮಳೆ ಸಂಬಂಧಿತ ಅವಘಡಗಳು ವರದಿಯಾಗಿವೆ. ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ (ಎನ್‌ಡಿಆರ್‌ಎಫ್) ಸೇರಿದಂತೆ ವಿವಿಧ ತಂಡಗಳು ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿವೆ.

ಇದೇ ವೇಳೆ, ಮುಂದಿನ ಐದು ದಿನಗಳ ಕಾಲ ಭಾರೀ ಮಳೆಯ ಮುನ್ಸೂಚನೆ ಹಿನ್ನೆಲೆಯಲ್ಲಿ ರಾಜ್ಯದ 12 ಜಿಲ್ಲೆಗಳಿಗೆ ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ಘೋಷಿಸಿದೆ.

ಮಳೆ ಮುಂದುವರಿಯುವ ಸಾಧ್ಯತೆ ಇರುವುದರಿಂದ ನದಿಗಳು, ಗುಡ್ಡಪ್ರದೇಶಗಳು ಹಾಗೂ ಭೂಕುಸಿತ ಸಂಭವಿಸುವ ಪ್ರದೇಶಗಳ ಬಳಿ ಸಾರ್ವಜನಿಕರು ಎಚ್ಚರಿಕೆಯಿಂದ ಇರಬೇಕು ಎಂದು ರಾಜ್ಯ ಸರ್ಕಾರ ಹಾಗೂ ಹವಾಮಾನ ಇಲಾಖೆ ಸೂಚಿಸಿದ್ದು, ಅಗತ್ಯವಿದ್ದಲ್ಲಿ ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಮನವಿ ಮಾಡಲಾಗಿದೆ. ರಕ್ಷಣಾ ಹಾಗೂ ಪರಿಹಾರ ಕಾರ್ಯಗಳನ್ನು ಮತ್ತಷ್ಟು ಚುರುಕುಗೊಳಿಸಲು ರಾಜ್ಯ ಸರ್ಕಾರವು ಸಂಬಂಧಿತ ಜಿಲ್ಲಾಡಳಿತಗಳಿಗೆ ಸೂಚನೆ ನೀಡಿದ್ದು, ಅಗತ್ಯವಿರುವ ಎಲ್ಲ ನೆರವು ತಲುಪಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

# ಕರಾವಳಿಯಲ್ಲಿ ಭಾರೀ ಮಳೆ; ಶಾಲೆಗಳಿಗೆ ರಜೆ

● ವಿಕ್ರಮ ವಾಹಿನಿ | ಮಂಗಳೂರು/ ಉಡುಪಿ

ಕರಾವಳಿ ಭಾಗದಲ್ಲಿ ನಿರಂತರವಾಗಿ ಸುರಿಯುತ್ತಿರುವ ಭಾರೀ ಮಳೆಯ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಉಡುಪಿ ಜಿಲ್ಲೆಯ ಶಾಲೆಗಳು ಹಾಗೂ ದಕ್ಷಿಣ ಕನ್ನಡ ಜಿಲ್ಲೆಯ ವಿವಿಧ ತಾಲೂಕುಗಳ ಶಾಲೆಕಾಲೇಜುಗಳಿಗೆ ಮಂಗಳವಾರ ರಜೆ ಘೋಷಿಸಲಾಗಿದೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಂಗಳೂರು, ಉಳ್ಳಾಲ, ಮೂಡಬಿದ್ರೆ, ಬಂಟ್ವಾಳ ಹಾಗೂ ಮುಲ್ಕಿ ತಾಲೂಕುಗಳ ಅಂಗನವಾಡಿ ಕೇಂದ್ರಗಳಿಂದ 10ನೇ ತರಗತಿವರೆಗಿನ ವಿದ್ಯಾರ್ಥಿಗಳಿಗೆ ರಜೆ ಘೋಷಿಸಿ ಜಿಲ್ಲಾಧಿಕಾರಿ ದರ್ಶನ್ ಎಚ್.ವಿ. ಆದೇಶ ಹೊರಡಿಸಿದ್ದಾರೆ.

ಪುತ್ತೂರು, ಬೆಳ್ತಂಗಡಿ, ಕಡಬ ಹಾಗೂ ಸುಳ್ಯ ತಾಲೂಕುಗಳಲ್ಲಿ ಅಂಗನವಾಡಿಯಿಂದ ದ್ವಿತೀಯ ಪಿಯುಸಿವರೆಗೆ, ಐಟಿಐ ಹಾಗೂ ಡಿಪ್ಲೊಮಾ ಕಾಲೇಜುಗಳಿಗೂ ರಜೆ ಘೋಷಿಸಲಾಗಿದೆ.

ಉಡುಪಿ ಜಿಲ್ಲೆಯಲ್ಲಿ ಭಾರೀ ಮಳೆಯ ಕಾರಣ ಜಿಲ್ಲೆಯ ಎಲ್ಲಾ ಅಂಗನವಾಡಿ ಕೇಂದ್ರಗಳು, ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ ರಜೆ ನೀಡಲಾಗಿದೆ ಎಂದು ಜಿಲ್ಲಾಧಿಕಾರಿ ಸ್ವರೂಪ ಟಿ.ಕೆ. ತಿಳಿಸಿದ್ದಾರೆ. ಆದರೆ ಪಿಯುಸಿ, ಐಟಿಐ, ಡಿಪ್ಲೊಮಾ, ಪದವಿ, ಸ್ನಾತಕೋತ್ತರ ಹಾಗೂ ಇಂಜಿನಿಯರಿಂಗ್ ಕಾಲೇಜುಗಳು ಎಂದಿನಂತೆ ಕಾರ್ಯನಿರ್ವಹಿಸಲಿವೆ ಎಂದು ಆದೇಶದಲ್ಲಿ ಸ್ಪಷ್ಟಪಡಿಸಲಾಗಿದೆ.


ಕರಾವಳಿ ಜಿಲ್ಲೆಗಳಲ್ಲಿ ಕಳೆದ ಕೆಲವು ದಿನಗಳಿಂದ ನಿರಂತರ ಮಳೆಯಾಗುತ್ತಿದ್ದು, ತಗ್ಗು ಪ್ರದೇಶಗಳಲ್ಲಿ ನೀರು ನಿಲ್ಲುವ ಸಾಧ್ಯತೆ ಹಾಗೂ ವಿದ್ಯಾರ್ಥಿಗಳ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಜಿಲ್ಲಾಡಳಿತ ಈ ಮುಂಜಾಗ್ರತಾ ಕ್ರಮ ಕೈಗೊಂಡಿದೆ. ಮಳೆ ಪರಿಸ್ಥಿತಿಯನ್ನು ಆಧರಿಸಿ ಮುಂದಿನ ದಿನಗಳಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.


ನದಿ, ಹಳ್ಳ-ಕೊಳ್ಳಗಳು ತುಂಬಿ ಹರಿಯುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರು ಎಚ್ಚರಿಕೆಯಿಂದ ಇರುವಂತೆ ಹಾಗೂ ಅನಗತ್ಯವಾಗಿ ಅಪಾಯಕಾರಿ ಸ್ಥಳಗಳಿಗೆ ತೆರಳದಂತೆ ಜಿಲ್ಲಾಡಳಿತ ಸೂಚನೆ ನೀಡಿದೆ. ತುರ್ತು ಪರಿಸ್ಥಿತಿಯಲ್ಲಿ ಜಿಲ್ಲಾಡಳಿತದ ಮಾರ್ಗಸೂಚಿಗಳನ್ನು ಪಾಲಿಸುವಂತೆ ಮನವಿ ಮಾಡಲಾಗಿದೆ.

ಮಳೆ ಸಂಬಂಧಿತ ಯಾವುದೇ ತುರ್ತು ಪರಿಸ್ಥಿತಿ ಎದುರಾದಲ್ಲಿ ಜಿಲ್ಲಾಡಳಿತ, ತಾಲೂಕು ಆಡಳಿತ ಹಾಗೂ ವಿಪತ್ತು ನಿರ್ವಹಣಾ ತಂಡಗಳು ಸನ್ನದ್ಧವಾಗಿರುವಂತೆ ಸೂಚಿಸಲಾಗಿದೆ. ಸಾರ್ವಜನಿಕರು ಹವಾಮಾನ ಇಲಾಖೆಯ ಮುನ್ಸೂಚನೆಗಳನ್ನು ಗಮನಿಸಿ ಮುನ್ನೆಚ್ಚರಿಕೆ ವಹಿಸುವಂತೆ ಅಧಿಕಾರಿಗಳು ಮನವಿ ಮಾಡಿದ್ದಾರೆ.

# ಕಾಕೋಳಿನಲ್ಲಿ ಆ.8ರಿಂದ ಚಾತುರ್ಮಾಸ್ಯ ಮಹೋತ್ಸವ

● ವಿಕ್ರಮ ವಾಹಿನಿ | ಬೆಂಗಳೂರು





ಕೋಲಾರ ಜಿಲ್ಲೆಯ ತಂಬಿಹಳ್ಳಿಯ ಶ್ರೀಮನ್ಮಾಧವತೀರ್ಥ ಮಠದ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ ವಿದ್ಯಾವಲ್ಲಭ ಮಾಧವತೀರ್ಥ ಶ್ರೀಪಾದರ 6ನೇ ಚಾತುರ್ಮಾಸ್ಯ ಮಹೋತ್ಸವವು ಆಗಸ್ಟ್ 8ರಿಂದ ಸೆಪ್ಟೆಂಬರ್ 26ರವರೆಗೆ ಯಲಹಂಕ ಸಮೀಪದ ಕಾಕೋಳಿನ ಶ್ರೀ ವೇಣುಗೋಪಾಲಸ್ವಾಮಿ ದೇವಸ್ಥಾನದಲ್ಲಿ ನಡೆಯಲಿದೆ.

ಆಗಸ್ಟ್ 7ರಂದು ಸಂಜೆ 5.30ಕ್ಕೆ ಕಾಕೋಳಿನ ಪ್ರವೇಶದ್ವಾರದಿಂದ ಮಂಗಳವಾದ್ಯ, ಭಜನಾ ಮಂಡಳಿಗಳೊಂದಿಗೆ ಶ್ರೀಗಳವರ ಭವ್ಯ ಪುರಪ್ರವೇಶ ಜರುಗಲಿದ್ದು, ಆಗಸ್ಟ್ 8ರಂದು ಬೆಳಿಗ್ಗೆ ಚಾತುರ್ಮಾಸ್ಯ ವ್ರತ ಸಂಕಲ್ಪ, ವೇದವ್ಯಾಸ ಪೂಜೆ ಹಾಗೂ ವಿಶೇಷ ಧಾರ್ಮಿಕ ವಿಧಿವಿಧಾನಗಳು ನೆರವೇರಲಿವೆ.

ಶ್ರೀಪಾದರಾಜ ಪ್ರತಿಷ್ಠಿತ ಬೃಂದಾವನಾಂತರ್ಗತ ಶ್ರೀ ವೇಣುಗೋಪಾಲಸ್ವಾಮಿ ಹಾಗೂ ಶ್ರೀ ವ್ಯಾಸರಾಜರಿಂದ ಪ್ರತಿಷ್ಠಾಪಿತ ಕಂಬದ ಆಂಜನೇಯಸ್ವಾಮಿಯ ಸನ್ನಿಧಿಯಲ್ಲಿ ನಡೆಯುವ ಮಹೋತ್ಸವದಲ್ಲಿ ಪ್ರತಿದಿನ ವಿಶೇಷ ಪೂಜೆ, ಪಾರಾಯಣ, ಪ್ರವಚನ, ಭಜನೆ, ದಾಸವಾಣಿ ಸೇರಿದಂತೆ ವಿವಿಧ ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಈ ಕಾರ್ಯಕ್ರಮಗಳನ್ನು ಪಾಂಚಜನ್ಯ ಪ್ರತಿಷ್ಠಾನ ಹಾಗೂ ತಿರುಮಲ ತಿರುಪತಿ ದೇವಸ್ಥಾನದ ಹಿಂದೂ ಧರ್ಮ ಪ್ರಚಾರ ಪರಿಷತ್ ಸಹಯೋಗದಲ್ಲಿ ಆಯೋಜಿಸಲಾಗಿದೆ.

ಆಗಸ್ಟ್ 16ರಂದು ಶ್ರೀಪಾದರ 85ನೇ ವರ್ಧಂತಿ ಅಂಗವಾಗಿ ಧನ್ವಂತರಿ ಹಾಗೂ ಮೃತ್ಯುಂಜಯ ಹೋಮ, ದಾಸವಾಣಿ ಕಾರ್ಯಕ್ರಮ, ಸೆಪ್ಟೆಂಬರ್ 4ರಂದು ಶ್ರೀಕೃಷ್ಣ ಜನ್ಮಾಷ್ಟಮಿ ವಿಶೇಷ ಆಚರಣೆ, ಸೆಪ್ಟೆಂಬರ್ 25ರಂದು ಸಾಮೂಹಿಕ ಅನಂತಪದ್ಮನಾಭ ವ್ರತ ಹಾಗೂ ಸೆಪ್ಟೆಂಬರ್ 26ರಂದು ಚಾತುರ್ಮಾಸ್ಯ ವ್ರತ ಸಮಾಪ್ತಿ ಮತ್ತು ಸೀಮೋಲ್ಲಂಘನ ಸಮಾರಂಭ ನಡೆಯಲಿದ್ದು, ಮಹೋತ್ಸವಕ್ಕೆ ತೆರೆ ಬೀಳಲಿದೆ.

ಭಕ್ತರು ವಿವಿಧ ಸೇವೆಗಳಲ್ಲಿ ಪಾಲ್ಗೊಳ್ಳಲು 91418 26180 ಅಥವಾ 63642 59787 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಚಾತುರ್ಮಾಸ್ಯ ಸ್ವಾಗತ ಸಮಿತಿ ಗೌರವಾಧ್ಯಕ್ಷ ಕೆ.ವಿ. ಗೋಪಾಲಕೃಷ್ಣ ಹಾಗೂ ಶ್ರೀಮಠದ ಕಾರ್ಯದರ್ಶಿ ಭದ್ರಾವತಿ ಕೃಷ್ಣಮೂರ್ತಿ ತಿಳಿಸಿದ್ದಾರೆ.

# ಬಿದರೆ ಶ್ರೀ ತಿರುಮಲ ಟ್ರಸ್ಟ್ ಸ್ಮರಣ ಸಂಚಿಕೆ ಬಿಡುಗಡೆ

● ವಿಕ್ರಮ ವಾಹಿನಿ | ಬೆಂಗಳೂರು



ತುಮಕೂರು ಜಿಲ್ಲೆಯ ಬಿದರೆ ಗ್ರಾಮದ ಶ್ರೀ ತಿರುಮಲ ಟ್ರಸ್ಟ್ ಸಾಗಿ ಬಂದ ಹಾದಿಯನ್ನು ದಾಖಲಿಸುವ ಸ್ಮರಣ ಸಂಚಿಕೆ ಬಿಡುಗಡೆ ಕಾರ್ಯಕ್ರಮ ಭಾನುವಾರ ಸಂಜೆ ಬೆಂಗಳೂರಿನ ವಿಲ್ಸನ್ ಗಾರ್ಡನ್‌ನ ಉಲ್ಲಕಮ್ಮೆ ಮಹಾಸಭಾ ಸಭಾಂಗಣದಲ್ಲಿ ನೆರವೇರಿತು.


ಭಾರತೀಯ ಜನತಾ ಪಕ್ಷದ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಬಿ.ಎಲ್. ಸಂತೋಷ್ ಸ್ಮರಣ ಸಂಚಿಕೆಯನ್ನು ಬಿಡುಗಡೆ ಮಾಡಿ ಮಾತನಾಡಿದರು. ಬಿದರೆ ಗ್ರಾಮದ ಶ್ರೀ ವೆಂಕಟೇಶ್ವರ ದೇವಸ್ಥಾನದ ಇತಿಹಾಸ, ಟ್ರಸ್ಟ್‌ನ ಬೆಳವಣಿಗೆ, ಗ್ರಾಮದಿಂದ ಬೆಂಗಳೂರಿಗೆ ಹಾಗೂ ವಿದೇಶಗಳಿಗೆ ವಲಸೆ ಹೋದ ಕುಟುಂಬಗಳ ನಡುವೆಯೂ ಊರಿನೊಂದಿಗೆ ಇರುವ ನಂಟು, ಬಾಂಧವ್ಯ ಮತ್ತು ಸಂಸ್ಕೃತಿಯನ್ನು ಜೀವಂತವಾಗಿಡುವ ಅಗತ್ಯವನ್ನು ಅವರು ವಿವರಿಸಿದರು. ಸಮಾಜದ ಏಕತೆ ಮತ್ತು ಪರಂಪರೆಯ ಸಂರಕ್ಷಣೆಗೆ ಇಂತಹ ಸಂಘಟನೆಗಳ ಪಾತ್ರ ಮಹತ್ವದ್ದಾಗಿದೆ ಎಂದು ಹೇಳಿದರು.

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭೆಯ ಅಧ್ಯಕ್ಷ ಎಸ್. ರಘುನಾಥ್ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಮಹಾಸಭೆಯ ಖಜಾಂಚಿ ಸುಬ್ಬನರಸಿಂಹ ಹಾಗೂ ಉಲ್ಲಕಮ್ಮೆ ಬ್ರಾಹ್ಮಣ ಮಹಾಸಭೆಯ ಅಧ್ಯಕ್ಷ ಲಕ್ಷ್ಮೀನಾರಾಯಣ ರಾವ್ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಟ್ರಸ್ಟ್‌ನ ಗೌರವಾಧ್ಯಕ್ಷ ವೆಂಕಟೇಶ್ ಉಪಸ್ಥಿತರಿದ್ದರೆ, ಟ್ರಸ್ಟ್ ಅಧ್ಯಕ್ಷ ಬಿದರೆ ಪ್ರಕಾಶ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಟ್ರಸ್ಟ್ ಸದಸ್ಯರು, ಬಿದರೆ ಗ್ರಾಮದವರು ಹಾಗೂ ವಿವಿಧ ಕ್ಷೇತ್ರಗಳ ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಬೆಂಗಳೂರಿನಲ್ಲಿ ಪ್ರಥಮ ಬಾರಿಗೆ ಫೈರ್ ಹೈಡ್ರೆಂಟ್ ಅಳವಡಿಕೆ

● ವಿಕ್ರಮ ವಾಹಿನಿ | ಬೆಂಗಳೂರು



ಬೆಂಗಳೂರು ನಗರದಲ್ಲಿ ಮೊದಲ ಬಾರಿಗೆ ವೈಟ್ ಟಾಪಿಂಗ್ ರಸ್ತೆಯಲ್ಲಿ ಫೈರ್ ಹೈಡ್ರೆಂಟ್ ವ್ಯವಸ್ಥೆಯನ್ನು ಅಳವಡಿಸಲಾಗಿದ್ದು, ಇದು ಅಗ್ನಿ ಅವಘಡಗಳ ಸಂದರ್ಭದಲ್ಲಿ ತ್ವರಿತವಾಗಿ ಬೆಂಕಿ ನಂದಿಸಲು ನೆರವಾಗಲಿದೆ ಎಂದು ಗಾಂಧಿನಗರ ಶಾಸಕ ದಿನೇಶ್ ಗುಂಡೂರಾವ್ ಹೇಳಿದರು.

ಟ್ಯಾಂಕ್ ಬಂಡ್ ರಸ್ತೆ, ಆರ್.ಟಿ. ಸ್ಟ್ರೀಟ್ ವೈಟ್ ಟಾಪಿಂಗ್ ರಸ್ತೆ ಹಾಗೂ 'ಈಝ್' ಸಾರ್ವಜನಿಕ ಶೌಚಾಲಯವನ್ನು ಲೋಕಾರ್ಪಣೆ ಮಾಡಿದ ಬಳಿಕ ಮಾತನಾಡಿದ ಅವರು, ಗಾಂಧಿನಗರ ಹಾಗೂ ಮೆಜೆಸ್ಟಿಕ್ ನಗರದ ಅತ್ಯಂತ ಹಳೆಯ ವಾಣಿಜ್ಯ ಪ್ರದೇಶಗಳಾಗಿದ್ದು, ಹಂತ ಹಂತವಾಗಿ ಆಧುನಿಕ ಮೂಲಸೌಕರ್ಯಗಳೊಂದಿಗೆ ಅಭಿವೃದ್ಧಿಪಡಿಸಲಾಗುತ್ತಿದೆ. ಇದೇ ಮಾದರಿಯ ರಸ್ತೆ ಅಭಿವೃದ್ಧಿಯನ್ನು ನಗರದ ಇತರೆ ಭಾಗಗಳಿಗೂ ವಿಸ್ತರಿಸಲಾಗುವುದು ಎಂದರು.

ಗಾಂಧಿನಗರ ಪೇಟೆ ಪ್ರದೇಶದ ರಸ್ತೆಗಳು ಕಿರಿದಾಗಿರುವುದರಿಂದ ಅಗ್ನಿಶಾಮಕ ವಾಹನಗಳ ಸಂಚಾರಕ್ಕೆ ತೊಂದರೆಯಾಗುತ್ತದೆ. ಈ ಹಿನ್ನೆಲೆಯಲ್ಲಿ ಹೊಸದಾಗಿ ನಿರ್ಮಿಸಿರುವ ವೈಟ್ ಟಾಪಿಂಗ್ ರಸ್ತೆಗಳಲ್ಲಿ ಫೈರ್ ಹೈಡ್ರೆಂಟ್ ವ್ಯವಸ್ಥೆ ಅಳವಡಿಸಲಾಗಿದ್ದು, ಅಗ್ನಿ ಅವಘಡ ಸಂಭವಿಸಿದಾಗ ತಕ್ಷಣ ನೀರು ಪೂರೈಸಿ ಬೆಂಕಿ ನಂದಿಸಲು ಇದು ಸಹಕಾರಿಯಾಗಲಿದೆ ಎಂದು ತಿಳಿಸಿದರು.

ಟ್ಯಾಂಕ್ ಬಂಡ್ ರಸ್ತೆಯನ್ನು ರೂ8.74 ಕೋಟಿ ವೆಚ್ಚದಲ್ಲಿ 418 ಮೀಟರ್ ಉದ್ದದಲ್ಲಿ ವೈಟ್ ಟಾಪಿಂಗ್ ಮೂಲಕ ಅಭಿವೃದ್ಧಿಪಡಿಸಲಾಗಿದ್ದು, ಮಳೆನೀರು ಚರಂಡಿ, ಪಾದಚಾರಿ ಮಾರ್ಗ, ಯುಟಿಲಿಟಿ ಡಕ್ಟ್ ಸೇರಿದಂತೆ ಸಮಗ್ರ ಮೂಲಸೌಕರ್ಯ ಕಲ್ಪಿಸಲಾಗಿದೆ.

ಇದೇ ರಸ್ತೆಯಲ್ಲಿ ಬಿಎಸ್‌ಡಬ್ಲ್ಯೂಎಂಎಲ್ ವತಿಯಿಂದ ಪ್ರಿಕಾಸ್ಟ್ ತಂತ್ರಜ್ಞಾನದ 'ಈಝ್' ಸಾರ್ವಜನಿಕ ಶೌಚಾಲಯವನ್ನು ನಿರ್ಮಿಸಲಾಗಿದ್ದು, ಮಹಿಳೆಯರು, ಪುರುಷರು, ಮಂಗಳಮುಖಿಯರು ಹಾಗೂ ವಿಕಲಚೇತನರಿಗೆ ಪ್ರತ್ಯೇಕ ಸೌಲಭ್ಯ ಕಲ್ಪಿಸಲಾಗಿದೆ.

ಆರ್.ಟಿ. ಸ್ಟ್ರೀಟ್ ಅನ್ನು ರೂ2.52 ಕೋಟಿ ವೆಚ್ಚದಲ್ಲಿ 645 ಮೀಟರ್ ಉದ್ದದಲ್ಲಿ ವೈಟ್ ಟಾಪಿಂಗ್ ಮೂಲಕ ಅಭಿವೃದ್ಧಿಪಡಿಸಲಾಗಿದ್ದು, ಬೆಂಗಳೂರಿನಲ್ಲೇ ಮೊದಲ ಬಾರಿಗೆ ಅತ್ಯಾಧುನಿಕ ಫೈರ್ ಹೈಡ್ರೆಂಟ್ ಜಾಲವನ್ನು ಅಳವಡಿಸಲಾಗಿದೆ. ಅಗ್ನಿಶಾಮಕ ವಾಹನಗಳ ಪ್ರವೇಶಕ್ಕೆ ಅಡಚಣೆಯಾಗುವ ಕಿರಿದಾದ ರಸ್ತೆಗಳಲ್ಲಿ ಈ ವ್ಯವಸ್ಥೆ ತುರ್ತು ಸ್ಪಂದನೆಗೆ ನೆರವಾಗಲಿದ್ದು, ನಗರ ಸುರಕ್ಷತೆ ದೃಷ್ಟಿಯಿಂದ ಮಹತ್ವದ ಹೆಜ್ಜೆಯಾಗಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ, ವಿಶೇಷ ಆಯುಕ್ತ ನಿತೀಶ್, ಕೇಂದ್ರ ನಗರ ಪಾಲಿಕೆ ಆಯುಕ್ತ ಜಗದೀಶ್, ಅಭಿವೃದ್ಧಿ ಅಪರ ಆಯುಕ್ತ ವೆಂಕಟಾಚಲಪತಿ, ಮುಖ್ಯ ಅಭಿಯಂತರ ವಿಜಯ್ ಕುಮಾರ್ ಹರಿದಾಸ್, ಮಾದೇಶ್ ಹಾಗೂ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

## ಪೇಟೆ ರಸ್ತೆಗೆ ಅಗ್ನಿ ಸುರಕ್ಷತೆ ಬಲ

● ವಿಕ್ರಮ ವಾಹಿನಿ | ಬೆಂಗಳೂರು

ಬೆಂಗಳೂರು ಪೇಟೆ ಪ್ರದೇಶದಲ್ಲಿ ನಿರ್ಮಿಸಿರುವ ವೈಟ್ ಟಾಪಿಂಗ್ ರಸ್ತೆಗಳಲ್ಲಿ ಮೊದಲ ಬಾರಿಗೆ 'ಫೈರ್ ಹೈಡ್ರೆಂಟ್' ವ್ಯವಸ್ಥೆಯನ್ನು ಅಳವಡಿಸಲಾಗಿದ್ದು, ಅಗ್ನಿ ಅವಘಡ ಸಂಭವಿಸಿದಾಗ ತ್ವರಿತವಾಗಿ ಬೆಂಕಿ ನಂದಿಸಲು ಇದು ನೆರವಾಗಲಿದೆ ಎಂದು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಸಚಿವ ಕೃಷ್ಣ ಬೈರೇಗೌಡ ತಿಳಿಸಿದರು.

ಗಾಂಧಿನಗರ ವಿಧಾನಸಭಾ ಕ್ಷೇತ್ರದ ಟ್ಯಾಂಕ್ ಬಂಡ್ ರಸ್ತೆ ಹಾಗೂ ಆರ್.ಟಿ. ಸ್ಟ್ರೀಟ್‌ನಲ್ಲಿ ನಿರ್ಮಿಸಿರುವ ನೂತನ ವೈಟ್ ಟಾಪಿಂಗ್ ರಸ್ತೆಗಳನ್ನು ಉದ್ಘಾಟಿಸಿ ಮಾತನಾಡಿದ ಅವರು, ಭವಿಷ್ಯದಲ್ಲಿ ರಸ್ತೆಗಳನ್ನು ಪದೇಪದೇ ಅಗೆಯುವ ಅಗತ್ಯ ಬಾರದಂತೆ ನೀರು ಸರಬರಾಜು, ಒಳಚರಂಡಿ, ಯುಟಿಲಿಟಿ ಡಕ್ಟ್, ಮಳೆನೀರು ಚರಂಡಿ ಹಾಗೂ ಪಾದಚಾರಿ ಮಾರ್ಗ ಸೇರಿದಂತೆ ಸಮಗ್ರ ಮೂಲಸೌಕರ್ಯಗಳನ್ನು ಒಂದೇ ಹಂತದಲ್ಲಿ ನಿರ್ಮಿಸಲಾಗಿದೆ ಎಂದರು.

ನಗರದಲ್ಲಿ ಮೊದಲ ಹಂತದಲ್ಲಿ 196 ಕಿ.ಮೀ. ವೈಟ್ ಟಾಪಿಂಗ್ ರಸ್ತೆ ಕಾಮಗಾರಿ ಪೂರ್ಣಗೊಂಡಿದ್ದು, ಎರಡನೇ ಹಂತದ 120 ಕಿ.ಮೀ. ಪೈಕಿ 60 ಕಿ.ಮೀ. ಕಾಮಗಾರಿ ಮುಗಿದಿದೆ. ಉಳಿದ ಕಾಮಗಾರಿ ಡಿಸೆಂಬರ್ ಒಳಗೆ ಪೂರ್ಣಗೊಳ್ಳಲಿದ್ದು, ಮೂರನೇ ಹಂತದಲ್ಲಿ ರೂ3,000 ಕೋಟಿ ವೆಚ್ಚದಲ್ಲಿ 250 ಕಿ.ಮೀ. ರಸ್ತೆ ಅಭಿವೃದ್ಧಿಗೆ ಚಾಲನೆ ನೀಡಲಾಗುವುದು ಎಂದು ಹೇಳಿದರು.

ನಗರದ ಸಾರ್ವಜನಿಕ ಶೌಚಾಲಯಗಳ ಕುರಿತು ಸಮೀಕ್ಷೆ ನಡೆಸಲಾಗಿದ್ದು, ವರದಿ ಆಧರಿಸಿ ದುರಸ್ತಿ, ನವೀಕರಣ ಹಾಗೂ ಅಗತ್ಯವಿರುವ ಕಡೆ ಹೊಸ ಶೌಚಾಲಯಗಳನ್ನು ನಿರ್ಮಿಸಲಾಗುವುದು ಎಂದು ತಿಳಿಸಿದರು.

ಟ್ಯಾಂಕ್ ಬಂಡ್ ರಸ್ತೆಯನ್ನು ರೂ8.74 ಕೋಟಿ ವೆಚ್ಚದಲ್ಲಿ 418 ಮೀಟರ್ ಉದ್ದದಲ್ಲಿ ಹಾಗೂ ಆರ್.ಟಿ. ಸ್ಟ್ರೀಟ್ ಅನ್ನು ರೂ2.52 ಕೋಟಿ ವೆಚ್ಚದಲ್ಲಿ 645 ಮೀಟರ್ ಉದ್ದದಲ್ಲಿ ವೈಟ್ ಟಾಪಿಂಗ್ ಮೂಲಕ ಅಭಿವೃದ್ಧಿಪಡಿಸಲಾಗಿದೆ. ಈ ರಸ್ತೆಗಳಲ್ಲಿ ಆಧುನಿಕ ಪಾದಚಾರಿ ಮಾರ್ಗ, ಯುಟಿಲಿಟಿ ಡಕ್ಟ್, ಎಲ್‌ಇಡಿ ಬೀದಿ ದೀಪಗಳು, ಥರ್ಮೋಪ್ಲಾಸ್ಟಿಕ್ ರಸ್ತೆ ಗುರುತುಗಳು ಹಾಗೂ ಟ್ಯಾಂಕ್ ಬಂಡ್ ರಸ್ತೆಯಲ್ಲಿ ಪ್ರಿಕಾಸ್ಟ್ ತಂತ್ರಜ್ಞಾನದ 'ಈಝ್' ಸಾರ್ವಜನಿಕ ಶೌಚಾಲಯವನ್ನು ನಿರ್ಮಿಸಲಾಗಿದೆ.

ಐತಿಹಾಸಿಕ ಬೆಂಗಳೂರು ಪೇಟೆಯ ಕಿರಿದಾದ ರಸ್ತೆಗಳಲ್ಲಿ ಅಗ್ನಿಶಾಮಕ ವಾಹನಗಳ ಸಂಚಾರಕ್ಕೆ ಎದುರಾಗುವ ತೊಂದರೆಯನ್ನು ನಿವಾರಿಸುವ ಉದ್ದೇಶದಿಂದ ಆರ್.ಟಿ. ಸ್ಟ್ರೀಟ್‌ನಲ್ಲಿ ಅಳವಡಿಸಿರುವ ಫೈರ್ ಹೈಡ್ರೆಂಟ್ ವ್ಯವಸ್ಥೆ ಬೆಂಗಳೂರಿನ ರಸ್ತೆಗಳಲ್ಲಿ ಇದೇ ಮೊದಲ ಪ್ರಯೋಗವಾಗಿದ್ದು, ನಗರ ಸುರಕ್ಷತೆ ದೃಷ್ಟಿಯಿಂದ ಮಹತ್ವದ ಹೆಜ್ಜೆಯಾಗಿದೆ.

# 'ಭಜ ಮನ' ಮೂಲಕ ದಾಸಸಾಹಿತ್ಯದ ಪಯಣ

● ವಿಕ್ರಮ ವಾಹಿನಿ | ಬೆಂಗಳೂರು



ಹೊಸ ತಲೆಮಾರಿಗೆ ಹರಿದಾಸ ಸಾಹಿತ್ಯ ಮತ್ತು ಭಕ್ತಿಗಾಯನದ ಪರಂಪರೆಯನ್ನು ಪರಿಚಯಿಸುವ ಉದ್ದೇಶದಿಂದ 'ಪರಮ್ ಕಲ್ಚರ್', 'ಹರಿವಂಶ ಗ್ರೂಪ್' ಹಾಗೂ 'ಯುವಕ ಸಂಘ'ದ ಸಹಯೋಗದಲ್ಲಿ 'ಭಜ ಮನ' ಹೆಸರಿನ ಎರಡು ದಿನಗಳ ವಿಶೇಷ ಗಾಯನ ಕಾರ್ಯಾಗಾರವನ್ನು ಆಗಸ್ಟ್ 6 ಮತ್ತು 7ರಂದು ಜಯನಗರದ ಯುವಕ ಸಂಘದಲ್ಲಿ ಸಂಜೆ 6ರಿಂದ 8 ಗಂಟೆಯವರೆಗೆ ಆಯೋಜಿಸಲಾಗಿದೆ.

ಖ್ಯಾತ ಶಾಸ್ತ್ರೀಯ ಸಂಗೀತ ವಿದ್ವಾಂಸ ಡಾ. ವಿದ್ಯಾಭೂಷಣ್ ಹಾಗೂ ಅವರ ಪುತ್ರಿ ಮೇಧಾ ವಿದ್ಯಾಭೂಷಣ್ ಕಾರ್ಯಾಗಾರಕ್ಕೆ ಮಾರ್ಗದರ್ಶನ ನೀಡಲಿದ್ದು, ಭಾಗವಹಿಸುವವರಿಗೆ ದಾಸರಪದಗಳು, ಭಜನೆಗಳು ಮತ್ತು ಭಕ್ತಿಗಾಯನದ ವೈಶಿಷ್ಟ್ಯಗಳನ್ನು ನೇರವಾಗಿ ಕಲಿಯುವ ಅವಕಾಶ ದೊರೆಯಲಿದೆ. ಜೊತೆಗೆ, ಡಾ. ವಿದ್ಯಾಭೂಷಣ್ ಅವರ ಸಂಗೀತ ಪಯಣ ಮತ್ತು ಹರಿದಾಸ ಸಾಹಿತ್ಯದ ಸೇವೆಯ ಕುರಿತ ಅನುಭವಗಳನ್ನು ಆಲಿಸುವ ಅವಕಾಶವೂ ಇರಲಿದೆ.

ನಾಲ್ಕು ಗಂಟೆಗಳ ಈ ಕಾರ್ಯಾಗಾರದಲ್ಲಿ ಭಾಗವಹಿಸುವವರಿಗೆ ವಿಶೇಷ ಕಲಿಕಾ ಸಾಮಗ್ರಿಗಳನ್ನು ನೀಡಲಾಗುವುದು. ಅತ್ಯುತ್ತಮ ಪ್ರದರ್ಶನ ನೀಡುವ ಆಯ್ದ ಅಭ್ಯಾಸಿಗಳಿಗೆ ಆಗಸ್ಟ್ 8ರಂದು ಎನ್‌ಎಂಕೆಆರ್‌ವಿ ಕಲಾಕ್ಷೇತ್ರದ ಮಂಗಳ ಮಂಟಪದಲ್ಲಿ ಸಂಜೆ 5 ಗಂಟೆಗೆ ನಡೆಯುವ ಮುಖ್ಯ ಸಂಗೀತ ಕಛೇರಿಯಲ್ಲಿ ಡಾ. ವಿದ್ಯಾಭೂಷಣ್ ಅವರೊಂದಿಗೆ ವೇದಿಕೆ ಹಂಚಿಕೊಂಡು ಹಾಡುವ ಅಪರೂಪದ ಅವಕಾಶ ಕಲ್ಪಿಸಲಾಗಿದೆ.

ನಾಲ್ಕು ದಶಕಗಳಿಂದ ಹರಿದಾಸ ಸಾಹಿತ್ಯವನ್ನು ದೇಶ-ವಿದೇಶಗಳಲ್ಲಿ ಜನಪ್ರಿಯಗೊಳಿಸಿರುವ ಡಾ. ವಿದ್ಯಾಭೂಷಣ್ ಅವರು 100ಕ್ಕೂ ಹೆಚ್ಚು ಸಂಗೀತ ಆಲ್ಬಮ್‌ಗಳ ಮೂಲಕ ದಾಸಸಾಹಿತ್ಯವನ್ನು ಮನೆಮನೆಗೆ ತಲುಪಿಸಿದ್ದಾರೆ. ಹಂಪಿಯ ಕನ್ನಡ ವಿಶ್ವವಿದ್ಯಾಲಯದ ಗೌರವ ಡಾಕ್ಟರೇಟ್ ಹಾಗೂ 'ಸಂಗೀತ ವಿದ್ಯಾ ನಿಧಿ' ಸೇರಿದಂತೆ ಹಲವು ಗೌರವಗಳಿಗೆ ಪಾತ್ರರಾಗಿರುವ ಅವರು, 'ಭಜ ಮನ' ಕಾರ್ಯಕ್ರಮದ ಮೂಲಕ ಯುವ ಗಾಯಕರಲ್ಲಿ ಭಕ್ತಿಗಾಯನದ ಪರಂಪರೆಯನ್ನು ಬೆಳೆಸುವ ಪ್ರಯತ್ನ ಮುಂದುವರಿಸಿದ್ದಾರೆ.

ಭಕ್ತಿ ಸಂಗೀತದ ಮೂಲಕ ಯುವಜನರಲ್ಲಿ ಮೌಲ್ಯಗಳು, ಸಂಸ್ಕೃತಿ ಮತ್ತು ಹರಿದಾಸರ ಸಾಹಿತ್ಯದ ಅರಿವು ಮೂಡಿಸುವ ಉದ್ದೇಶದಿಂದ ಈ ಕಾರ್ಯಕ್ರಮ ರೂಪಿಸಲಾಗಿದೆ ಎಂದು ಸಂಘಟಕರು ತಿಳಿಸಿದ್ದಾರೆ. ಕಾರ್ಯಾಗಾರದ ಸಮಾರೋಪವಾಗಿ ಆಗಸ್ಟ್ 8ರಂದು ನಡೆಯುವ ಭವ್ಯ ಸಂಗೀತ ಕಚೇರಿಯಲ್ಲಿ ಡಾ. ವಿದ್ಯಾಭೂಷಣ್ ಹಾಗೂ ಮೇಧಾ ವಿದ್ಯಾಭೂಷಣ್ ಅವರು ದಾಸರಪದಗಳ ಗಾಯನವನ್ನು ಪ್ರಸ್ತುತಪಡಿಸಲಿದ್ದಾರೆ.

# ಕೋಲಾರಕ್ಕೆ ಕಾಂಗ್ರೆಸ್ ನಾಯಕರಿಂದ ಮೋಸ: ಶಾಸಕ ಎಸ್ ಎನ್

● ವಿಕ್ರಮ ವಾಹಿನಿ | ಬಂಗಾರಪೇಟೆ



ಕಾಂಗ್ರೆಸ್ ಹೈ ಕಮಾಂಡ್ ಗೆ ಕೋಲಾರ ಅಂದರೆ ಅಷ್ಟಕ್ಕಷ್ಟೇ. ಅವರಿಗೆ ಒಂದು ರೀತಿ ಅಸಹ್ಯ ಎಂದು ಕಿಡಿ ಕಾರಿರುವ ಸಚಿವ ಸ್ಥಾನ ವಂಚಿತ ಶಾಸಕ ಎನ್.ಎಸ್.ನಾರಾಯಣಸ್ವಾಮಿ ಅವರು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಹಾಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಕೆಚ್.ಎಚ್.ಮುನಿಯಪ್ಪ ಮತ್ತು ಶಾಸಕಿ ರೂಪಕಲಾ ಅವರು ಮೋಸ ಮಾಡಿದ್ದಾರೆ ಎಂದು ನೇರವಾಗಿ ಹೇಳಿದ್ದಾರೆ.

ಕಳೆದ ಹಲವಾರು ದಿನಗಳಿಂದ ಕೋಲಾರ ಜಿಲ್ಲೆಗೆ ಪ್ರಾತಿನಿಧ್ಯ ಲಭಿಸಲಿದೆ ಎಂದು ಹೇಳಲಾಗುತ್ತಿತ್ತು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಸಾಮಾಜಿಕ ನ್ಯಾಯದ ಹರಿಕಾರ ಸಿದ್ದರಾಮಯ್ಯ ಅವರನ್ನು ನೆಚ್ಚಿಕೊಂಡಿದ್ದೆವು. ಸಿದ್ದರಾಮಯ್ಯ ಮೋಸ ಮಾಡಿದ್ದಾರೆಂದು ಎಸ್. ಎನ್.ನಾರಾಯಣಸ್ವಾಮಿ ಖಾರವಾಗಿ ನುಡಿದಿದ್ದಾರೆ. ಬಲಗೈ ಸಮುದಾಯಗಳ ಮತ ಪಡೆದು 7 ಬಾರಿ ಗೆದ್ದು ಸಂಸದರಾಗಿದ್ದ ಕೆ.ಎಚ್.ಮುನಿಯಪ್ಪ, ಅವರ ಪುತ್ರಿ ರೂಪಕಲಾ ಅವರೂ ಬಲಗೈ ಸಮುದಾಯದವರಿಗೆ ಸಚಿವ ಸ್ಥಾನ ಲಭಿಸದಂತೆ ನೋಡಿಕೊಂಡಿದ್ದಾರೆ ಎಂದು ಆರೋಪಿಸಿದರು.

ಈ ಹಿನ್ನೆಲೆಯಲ್ಲಿ ಶಾಸಕರ ಸಭೆ ಕರೆದು ಚರ್ಚಿಸುತ್ತೇವೆ. ಮುಂದಿನ ನಡೆ ಕುರಿತು ತೀರ್ಮಾನ ಪ್ರಕಟಿಸುತ್ತೇವೆ. ನಾನು ಕಳೆದ 35 ವರ್ಷಗಳಿಂದ ಪಕ್ಷದಲ್ಲಿದ್ದೇನೆ. ನನಗೀಗ 59 ವರ್ಷ. ಈಗ ಅಧಿಕಾರ ಕೊಡದೇ ಇನ್ಯಾವಾಗ ಕೊಡುತ್ತಾರೆ? ಬಲಗೈ ಸಮುದಾಯಕ್ಕೆ ಏಕೆ ಮೋಸ ಮಾಡುತ್ತಿದ್ದಾರೆ? ಹೈಕಮಾಂಡ್ ಏಕೆ ಅಸಹ್ಯ ಪಡುತ್ತಿದೆ? ಎಂದು ಎಸ್.ಎನ್.ನಾರಾಯಣಸ್ವಾಮಿ ಪ್ರಶ್ನಿಸಿದ್ದಾರೆ.

# 'ಕಾಂಗ್ರೆಸ್‌ನಿಂದ ಸಾಂವಿಧಾನಿಕ ಆಶಯಗಳು ಗಾಳಿಗೆ'

● ವಿಕ್ರಮ ವಾಹಿನಿ | ಕಾರ್ಕಳ



ನೂತನ ಸಚಿವ ಸಂಪುಟದ ವಿಸ್ತರಣೆಯ ಭರಾಟೆಯಲ್ಲಿ ಕಾಂಗ್ರೆಸ್ ಪಕ್ಷ ಸಾಂವಿಧಾನಿಕ ಸ್ಥಾನಗಳನ್ನೂ ತನ್ನ ಪಕ್ಷದ ಲೆಟರ್ ಹೆಡ್ ನ ಪತ್ರದಲ್ಲಿ ನಮೂದಿಸುವ ಮೂಲಕ ಸಾಂವಿಧಾನಿಕ ಆಶಯಗಳನ್ನು ಗಾಳಿಗೆ ತೂರಿದೆ ಎಂದು ಕರ್ನಾಟಕ ಸರ್ಕಾರದ ಮಾಜಿ ಸಚಿವರು ಹಾಗೂ ಕಾರ್ಕಳದ ಹಾಲಿ ಶಾಸಕರೂ ಆಗಿರುವ ವಿ.ಸುನೀಲ್ ಕುಮಾರ್ ಅವರು ಆರೋಪಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುವ ಅವರು, ಕಾಂಗ್ರೆಸ್ ಸಾಂವಿಧಾನಿಕ ಆಶಯಗಳನ್ನು ಹೇಗೆ ಬೇಕಾದರೂ ಗಾಳಿಗೆ ತೂರುತ್ತದೆ ಎನ್ನುವುದಕ್ಕೆ ಇದು ನಿದರ್ಶನ. ಸ್ಪೀಕರ್, ಉಪಸಭಾಧ್ಯಕ್ಷ, ಸಭಾಪತಿ, ಉಪಸಭಾಪತಿ ಸ್ಥಾನ ಸಂವಿಧಾನಾತ್ಮಕ ಹುದ್ದೆಗಳು. ಇವುಗಳ ಆಯ್ಕೆ ಪ್ರಕ್ರಿಯೆಗೆ ಅದರದ್ದೇ ಆದ ಮಾರ್ಗ ಹಾಗೂ ನಿಯಮಗಳಿವೆ. ಆದರೆ ಕಾಂಗ್ರೆಸ ಪಕ್ಷದ ಲೆಟರ್ ಹೆಡ್ ನಲ್ಲಿ ಈ ಹುದ್ದೆಗೆ ಆಯ್ಕೆಯಾದವರ ಹೆಸರು ಪ್ರಕಟಿಸಿರುವುದು ಶಾಸನಸಭೆಯ ನಿಯಮಗಳ ಅಣಕವಲ್ಲದೇ ಮತ್ತೇನು? ಎಂದು ಪ್ರಶ್ನಿಸಿದ್ದಾರೆ.

ಸಭಾಧ್ಯಕ್ಷ, ಉಪಸಭಾಧ್ಯಕ್ಷ, ಸಭಾಪತಿ ಹಾಗೂ ಉಪಸಭಾಪತಿಗಳು ಯಾವುದೇ ಪಕ್ಷದ ಪ್ರತಿನಿಧಿಗಳಲ್ಲ. ಅವರು ಇಡೀ ಸದನದ ಮತ್ತು ಪ್ರಜಾಪ್ರಭುತ್ವದ ಗೌರವವನ್ನು ಪ್ರತಿನಿಧಿಸುವ ಸಂವಿಧಾನಾತ್ಮಕ ಹುದ್ದೆಗಳಲ್ಲಿರುವವರು. ಇಂತಹ ಹುದ್ದೆಗಳಿಗೆ ಸಂಬಂಧಿಸಿದ ಅಧಿಕೃತ ಪತ್ರವ್ಯವಹಾರವನ್ನು ಕಾಂಗ್ರೆಸ್ ಪಕ್ಷದ ಲೆಟರ್‌ಹೆಡ್‌ನಲ್ಲಿ ನಡೆಸಿರುವುದು ಕೇವಲ ಒಂದು ಆಡಳಿತಾತ್ಮಕ ಲೋಪವಲ್ಲ. ಸಂವಿಧಾನಾತ್ಮಕ ಹುದ್ದೆಗಳ ನಿಷ್ಪಕ್ಷಪಾತತೆ ಮತ್ತು ಘನತೆಯನ್ನು ಪಕ್ಷದ ಚೌಕಟ್ಟಿನೊಳಗೆ ಸೀಮಿತಗೊಳಿಸುವ ಆತಂಕಕಾರಿ ನಡೆ.

ಈ ನಿರ್ಧಾರ ಭವಿಷ್ಯದಲ್ಲಿ ಅತ್ಯಂತ ಅಪಾಯಕಾರಿ ಪೂರ್ವನಿದರ್ಶನಗಳನ್ನು ಸೃಷ್ಟಿಸುವ ಅಪಾಯವಿದೆ. ಲೋಕಸಭೆಯಲ್ಲಿ ಪ್ರಜಾತಂತ್ರ ಅಪಾಯದಲ್ಲಿದೆ ಎಂದು ಅರಚುವ ರಾಹುಲ್ ಗಾಂಧಿಯವರ ದ್ವಿಮುಖ ನೀತಿಗೆ ಈ ಲೆಟರ್ ಹೆಡ್ ಆದೇಶ ಒಂದು ಉದಾಹರಣೆಯಾಗಿದೆ. ಹಿಂದೆ ಕಾಂಗ್ರೆಸ್ ನಲ್ಲಿ ಪ್ರಸಿದ್ಧವಾಗಿದ್ದ ಲಕೋಟೆ ರಾಜಕಾರಣ ಮುಖ್ಯಮಂತ್ರಿ ಯಾರೆಂದೆ ನಿರ್ಧರಿಸುತ್ತಿತ್ತು. ಈಗ ಲೆಟರ್ ಹೆಡ್ ಶಾಸನಸಭೆಯ ಮುಖ್ಯಸ್ಥನ ಆಯ್ಕೆಯವರೆಗೆ ಬಂದಿರುವುದು ದುರಾದೃಷ್ಟಕರ ಬೆಳವಣಿಗೆ ಎಂದು ವಿ.ಸುನಿಲ್ ಕುಮಾರ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ನೂತನ ಸಚಿವ ಸಂಪುಟ ರಚನೆ ಮತ್ತು ವಿಧಾನಮಂಡಲದ ಪ್ರಮುಖ ಹುದ್ದೆಗಳ ನೇಮಕಾತಿ ವಿಚಾರದಲ್ಲಿ ಕಾಂಗ್ರೆಸ್ ಹೈಕಮಾಂಡ್‌ನ ಪಾತ್ರದ ಬಗ್ಗೆ ಪಾರದರ್ಶಕತೆ ಇರಬೇಕು ಎಂದು ಸುನೀಲ್ ಕುಮಾರ್ ಒತ್ತಾಯಿಸಿದ್ದಾರೆ. ಸಂವಿಧಾನಾತ್ಮಕ ಹುದ್ದೆಗಳ ಘನತೆ ಹಾಗೂ ನಿಷ್ಪಕ್ಷಪಾತತೆಯನ್ನು ಕಾಪಾಡುವುದು ಎಲ್ಲ ರಾಜಕೀಯ ಪಕ್ಷಗಳ ಜವಾಬ್ದಾರಿಯಾಗಿದ್ದು, ಈ ರೀತಿಯ ಕ್ರಮಗಳು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ಧಕ್ಕೆಯಾಗದಂತೆ ಸರ್ಕಾರ ಮತ್ತು ಕಾಂಗ್ರೆಸ್ ನಾಯಕತ್ವ ಸ್ಪಷ್ಟನೆ ನೀಡಬೇಕು ಎಂದು ಅವರು ಆಗ್ರಹಿಸಿದ್ದಾರೆ.

www.VIKRAMAVAHINI.com
ಕನ್ನಡ ದಿನಪತ್ರಿಕೆ
ವಿಕ್ರಮ ವಾಹಿನಿ

# ಬ್ರಾಹ್ಮಣರು ಸಂಘಟಿತರಾದರೆ ಧರ್ಮ-ಸಂಸ್ಕೃತಿ ಉಳಿಯುತ್ತದೆ: ಶ್ರೀ ಶ್ರೀ ಸುಜಯನಿಧಿ ತೀರ್ಥರು

## ಅಕ್ಷಯ ವಿಪ್ರ ಮಹಾಸಭಾದ 19ನೇ ವಾರ್ಷಿಕೋತ್ಸವ; ನಾಲ್ವರಿಗೆ 'ಅಕ್ಷಯ ರತ್ನ' ಪ್ರಶಸ್ತಿ ಪ್ರದಾನ

● ವಿಕ್ರಮ ವಾಹಿನಿ | ಬೆಂಗಳೂರು

ಸಮಾಜದ ಏಳಿಗೆಗಾಗಿ ಬ್ರಾಹ್ಮಣರು ಸಂಘಟಿತರಾಗಿ ಕಾರ್ಯನಿರ್ವಹಿಸಬೇಕು. ಧರ್ಮ ಮತ್ತು ಸಂಸ್ಕೃತಿಯನ್ನು ಉಳಿಸುವ ಹೊಣೆ ಪ್ರತಿಯೊಬ್ಬರ ಮೇಲಿದೆ. ಧರ್ಮ ಉಳಿದರೆ ಮನುಷ್ಯ ಉಳಿಯುತ್ತಾನೆ ಎಂದು ಮುಳಬಾಗಿಲಿನ ಶ್ರೀಪಾದರಾಜ ಮಠದ ಪೀಠಾಧಿಪತಿಗಳಾದ 1008 ಶ್ರೀ ಶ್ರೀ ಸುಜಯನಿಧಿ ತೀರ್ಥ ಶ್ರೀಪಾದರು ಹೇಳಿದರು.

ಜಯನಗರದ ವಿಜಯ ಕಾಲೇಜು ಸಭಾಂಗಣದಲ್ಲಿ ಅಕ್ಷಯ ವಿಪ್ರ ಮಹಾಸಭಾ ವತಿಯಿಂದ ಆಯೋಜಿಸಿದ್ದ 19ನೇ ವಾರ್ಷಿಕೋತ್ಸವ, 'ಅಕ್ಷಯ ರತ್ನ' ಪ್ರಶಸ್ತಿ ಪ್ರದಾನ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಅವರು ಆಶೀರ್ವಚನ ನೀಡಿದರು. ಕಾರ್ಯಕ್ರಮಕ್ಕೆ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಅಧ್ಯಕ್ಷ ಎಸ್. ರಘುನಾಥ್, ಅಕ್ಷಯ ವಿಪ್ರ ಮಹಾಸಭಾದ ಅಧ್ಯಕ್ಷ ಎನ್.ಕೆ. ರಾಮಚಂದ್ರರಾವ್ ಹಾಗೂ ಗೌರವಾಧ್ಯಕ್ಷ ಡಾ. ಎನ್. ಕೀರ್ತಿರಾಜ್ ಚಾಲನೆ ನೀಡಿದರು.

ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಎನ್.ಜಿ. ವಾಸುದೇವಮೂರ್ತಿ, ಡಾ. ಕೆ. ರಘುನಾಥರಾವ್, ದಿ. ಎಸ್. ರಾಮಕೃಷ್ಣ ಹಾಗೂ ಎನ್.ಕೆ. ಪಣೀರಾಜ್ ಅವರಿಗೆ 'ಅಕ್ಷಯ ರತ್ನ' ಪ್ರಶಸ್ತಿ ಪ್ರದಾನ ಮಾಡಿ ಸನ್ಮಾನಿಸಲಾಯಿತು.



ಶ್ರೀ ಸುಜಯನಿಧಿ ತೀರ್ಥರು ಮಾತನಾಡಿ, ಬ್ರಾಹ್ಮಣ ಸಮಾಜ ಸಂಖ್ಯೆಯಲ್ಲಿ ವಿರಳವಾಗಿರುವುದರಿಂದ ಎಲ್ಲರೂ ಒಗ್ಗಟ್ಟಿನಿಂದ ಸಮಾಜದ ಅಭಿವೃದ್ಧಿಗೆ ಶ್ರಮಿಸಬೇಕು. ಆರ್ಥಿಕವಾಗಿ ಸದೃಢರಾಗಿರುವವರು ಅಗತ್ಯವಿರುವ ಕುಟುಂಬಗಳಿಗೆ ನೆರವು ನೀಡಬೇಕು. ಮಕ್ಕಳಿಗೆ ಧರ್ಮ, ಸಂಸ್ಕೃತಿ ಮತ್ತು ಸಂಪ್ರದಾಯದ ಶಿಕ್ಷಣ ನೀಡುವುದು ಇಂದಿನ ಅಗತ್ಯವಾಗಿದೆ. ನದಿಗಳು ಸೇರಿ ಸಮುದ್ರವಾಗುವಂತೆ ಬ್ರಾಹ್ಮಣರು ಒಂದಾಗಿ ಸಮಾಜದ ಶಕ್ತಿಯನ್ನು ಹೆಚ್ಚಿಸಬೇಕು ಎಂದು ಕರೆ ನೀಡಿದರು.

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಅಧ್ಯಕ್ಷ ಎಸ್. ರಘುನಾಥ್ ಮಾತನಾಡಿ, ಅಕ್ಷಯ ವಿಪ್ರ ಮಹಾಸಭಾ ಸಮಾಜ ಸಂಘಟನೆಯಲ್ಲಿ ಉತ್ತಮ ಕಾರ್ಯ ನಿರ್ವಹಿಸುತ್ತಿದೆ ಎಂದು ಶ್ಲಾಘಿಸಿದರು. ಶಿಕ್ಷಣ, ಆರೋಗ್ಯ ಹಾಗೂ ಸಮಾಜದ ಅಭಿವೃದ್ಧಿಗೆ ಆದ್ಯತೆ ನೀಡುವ ಉದ್ದೇಶದಿಂದ 100 ಕೋಟಿ ದತ್ತಿನಿಧಿ ಸ್ಥಾಪಿಸಲಾಗಿದ್ದು, ಆರ್ಥಿಕವಾಗಿ ಸಬಲರಾಗಿರುವವರು ಇದಕ್ಕೆ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ವೇದಪಾಠ ಕೇಂದ್ರ, ಶಾಸ್ತ್ರೀಯ ಸಂಗೀತ, ಯೋಗ ತರಬೇತಿ, ಉಚಿತ ಆರೋಗ್ಯ ತಪಾಸಣೆ ಶಿಬಿರ ಹಾಗೂ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಸೇರಿದಂತೆ ಹಲವು ಸಮಾಜಮುಖಿ ಕಾರ್ಯಕ್ರಮಗಳನ್ನು ಮಹಾಸಭೆ ನಡೆಸುತ್ತಿದೆ ಎಂದು ತಿಳಿಸಿದರು. ಆಚಾರ್ಯರನ್ನು ಅವಹೇಳನ ಮಾಡಬಾರದು, ಸಮಾಜದಲ್ಲಿ ಭಿನ್ನಾಭಿಪ್ರಾಯಗಳಿಗೆ ಅವಕಾಶ ನೀಡದೆ ಎಲ್ಲರೂ ಸಹೋದರರಂತೆ ಬದುಕಬೇಕು. ಸಂಘಟನೆಯೇ ಸಮಾಜದ ಶಕ್ತಿ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಕೆ. ಆನಂದರಾವ್, ಡಾ. ಕಿರಣ್ ಎಸ್. ಮೂರ್ತಿ, ಲಕ್ಷ್ಮೀಶ್ ವಿ. ಶ್ರೀಪ್ರಕಾಶ್, ಕೆ. ರಾಘವೇಂದ್ರರಾವ್, ಎನ್.ಎಸ್. ಸುಧೀಂದ್ರರಾವ್, ಮಹೇಶ್ ಕುಮಾರ್ ಆರ್., ಟಿ.ಎನ್. ಶಾಂತಕುಮಾರ್, ಎನ್.ಪಿ. ಮಂಜುನಾಥ್, ಎಲ್. ಜಗನ್ನಾಥ್, ಆರ್. ಶ್ರೀನಿವಾಸ್, ಎನ್.ಜೆ. ಮಣಿಕುಮಾರ್, ಎ. ವಿಜಯಕುಮಾರ್ ಭಟ್ ಸೇರಿದಂತೆ ಮಹಾಸಭೆಯ ಪದಾಧಿಕಾರಿಗಳು, ಕಾರ್ಯಕಾರಿ ಸಮಿತಿ ಸದಸ್ಯರು ಹಾಗೂ ಅಪಾರ ಸಂಖ್ಯೆಯ ಸಮಾಜದ ಮುಖಂಡರು ಉಪಸ್ಥಿತರಿದ್ದರು.

# ಅಭಿಜಿತ್ ದೀಪ್ಕೆ ಹಣಕಾಸು, ಸಿಜೆಪಿ ನಿಧಿ ತನಿಖೆಗೆ ಆಗ್ರಹ

● ವಿಕ್ರಮ ವಾಹಿನಿ | ನವದೆಹಲಿ

ಕಾಕ್ರೋಚ್ ಜನತಾ ಪಾರ್ಟಿ (ಸಿಜೆಪಿ) ಸಂಸ್ಥಾಪಕ ಅಭಿಜಿತ್ ದೀಪ್ಕೆ ಅವರ ವಿದೇಶಿ ಶಿಕ್ಷಣಕ್ಕೆ ಹಣಕಾಸು ಹೇಗೆ ಒದಗಿಸಲಾಯಿತು ಹಾಗೂ ಸಿಜೆಪಿಯ ನಿಧಿ ಸಂಗ್ರಹ ಮತ್ತು ಕಾನೂನುಬದ್ಧ ಸ್ಥಿತಿಯ ಕುರಿತು ತನಿಖೆ ನಡೆಸುವಂತೆ ಸೂರತ್ ಮೂಲದ ಆರ್‌ಟಿಐ ಕಾರ್ಯಕರ್ತ ಅಮಿತ್ ತಿವಾರಿ ಕೇಂದ್ರ ಹಾಗೂ ಚುನಾವಣಾ ಆಯೋಗಕ್ಕೆ ಮನವಿ ಮಾಡಿದ್ದಾರೆ.



ಮಹಾರಾಷ್ಟ್ರದ ನಿವೃತ್ತ ಸರ್ಕಾರಿ ಉದ್ಯೋಗಿಯಾಗಿದ್ದ ಅಭಿಜಿತ್ ದೀಪ್ಕೆ ಅವರ ತಂದೆ ಭಗವಾನ್‌ರಾವ್ ದೀಪ್ಕೆ ತಮ್ಮ ಮಗನ ಉನ್ನತ ಶಿಕ್ಷಣಕ್ಕಾಗಿ ವಿದೇಶಕ್ಕೆ ಹೇಗೆ ಹಣಕಾಸು ಒದಗಿಸಿದರು ಎಂಬ ಬಗ್ಗೆ ತನಿಖೆ ನಡೆಸಬೇಕೆಂದು ತಿವಾರಿ ಒತ್ತಾಯಿಸಿದ್ದಾರೆ. ಅವರ ಆರ್ಥಿಕ ಹಿನ್ನೆಲೆ ಮತ್ತು ಆದಾಯದ ಮೂಲಗಳ ಪರಿಶೀಲನೆ ಅಗತ್ಯವಿದೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ.

ಇದೇ ವೇಳೆ, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ಪ್ರತಿಭಟನೆಗಳ ಹಿನ್ನೆಲೆಯಲ್ಲಿ ಪೊಲೀಸ್ ಪ್ರಕರಣಗಳನ್ನು ಎದುರಿಸುತ್ತಿರುವ ಪ್ರತಿಭಟನಾಕಾರರಿಗೆ ಸಿಜೆಪಿ ಘೋಷಿಸಿರುವ ಕಾನೂನು ನೆರವು ನಿಧಿಯ ಬಗ್ಗೆಯೂ ಅವರು ಪ್ರಶ್ನೆ ಎತ್ತಿದ್ದಾರೆ. ಈ ಸಂಬಂಧ ಸಿಜೆಪಿ ಜನತಾ ಪ್ರಾತಿನಿಧ್ಯ ಕಾಯ್ದೆ–1951ರ ಸೆಕ್ಷನ್ 29ಎ ಅಡಿಯಲ್ಲಿ ನೋಂದಾಯಿತ ರಾಜಕೀಯ ಪಕ್ಷವೇ ಎಂಬುದನ್ನು ಪರಿಶೀಲಿಸುವಂತೆ ಭಾರತೀಯ ಚುನಾವಣಾ ಆಯೋಗಕ್ಕೆ ಮನವಿ ಸಲ್ಲಿಸಿದ್ದಾರೆ.

ಅಲ್ಲದೆ, ಸಿಜೆಪಿಯ ನಿಧಿ ಸಂಗ್ರಹ ಹಾಗೂ ಹಣಕಾಸು ವ್ಯವಹಾರಗಳ ಕುರಿತು ಸೂಕ್ತ ತನಿಖೆ ನಡೆಸುವಂತೆ ಕೇಂದ್ರ ಜಿಎಸ್‌ಟಿ ಪ್ರಾಧಿಕಾರಕ್ಕೂ ಪ್ರತ್ಯೇಕ ಮನವಿ ಸಲ್ಲಿಸಿರುವುದಾಗಿ ತಿವಾರಿ ತಿಳಿಸಿದ್ದಾರೆ.

# ರೂ 5.50 ಲಕ್ಷ ಲಂಚ: ಹುಣಸೂರು ಎಸಿ ಲೋಕಾಯುಕ್ತ ಬಲೆಗೆ

● ವಿಕ್ರಮ ವಾಹಿನಿ | ಮೈಸೂರು

ರೂ 5.50 ಲಕ್ಷ ಲಂಚ ಸ್ವೀಕರಿಸುತ್ತಿದ್ದ ವೇಳೆ ಹುಣಸೂರು ಉಪ ವಿಭಾಗಾಧಿಕಾರಿ (ಎಸಿ) ಕಾವ್ಯಾರಾಣಿ ಅವರನ್ನು ಲೋಕಾಯುಕ್ತ ಪೊಲೀಸರು ಸೋಮವಾರ ಬಲೆಗೆ ಬೀಳಿಸಿದ್ದಾರೆ.

ಎಚ್.ಡಿ.ಕೋಟೆ ತಾಲ್ಲೂಕಿನ ಸ.ನಂ.17/26ರ 4 ಎಕರೆ 20 ಗುಂಟೆ ಜಮೀನಿಗೆ ಸಂಬಂಧಿಸಿದ ಕಂದಾಯ ಮೇಲ್ಮನವಿಯನ್ನು ಇತ್ಯರ್ಥಪಡಿಸಲು ನ್ಯಾಯಾಲಯದ ಆದೇಶವಿದ್ದರೂ, ಪ್ರಕರಣ ಇತ್ಯರ್ಥಗೊಳಿಸಲು ಕಾವ್ಯಾರಾಣಿ ರೂ 10 ಲಕ್ಷ ಲಂಚಕ್ಕೆ ಬೇಡಿಕೆ ಇಟ್ಟಿದ್ದರು ಎನ್ನಲಾಗಿದೆ.

ದೂರುದಾರರಾದ ಡಾ. ರೂಪಾ ಅವರು ಮೊದಲ ಕಂತಿನಲ್ಲಿ ರೂ5 ಲಕ್ಷ ನೀಡಿದ ಬಳಿಕ ಲೋಕಾಯುಕ್ತ ಪೊಲೀಸರಿಗೆ ದೂರು ನೀಡಿದ್ದರು. ಅದರಂತೆ ಲೋಕಾಯುಕ್ತ ಅಧಿಕಾರಿಗಳು ಬಲೆ ಬೀಸಿ, ಎರಡನೇ ಕಂತಿನ ರೂ 5.50 ಲಕ್ಷ ಲಂಚವನ್ನು ಕಾವ್ಯಾರಾಣಿ ಸ್ವೀಕರಿಸುತ್ತಿದ್ದ ವೇಳೆ ದಾಳಿ ನಡೆಸಿ ಅವರನ್ನು ರೆಡ್‌ಹ್ಯಾಂಡ್ ಆಗಿ ಬಂಧಿಸಿದರು.

ಲೋಕಾಯುಕ್ತ ಅಧಿಕಾರಿಗಳು ಪ್ರಕರಣ ದಾಖಲಿಸಿಕೊಂಡಿದ್ದು, ಮುಂದಿನ ತನಿಖೆ ಮುಂದುವರಿಸಿದ್ದಾರೆ.

# ಅನಿಲ ಸೋರಿಕೆ: 11 ಕಾರ್ಮಿಕರು ಅಸ್ವಸ್ಥ, ಆಸ್ಪತ್ರೆಗೆ ದಾಖಲು



● ವಿಕ್ರಮ ವಾಹಿನಿ | ಸೇಲಂ (ತಮಿಳುನಾಡು)

ಸೇಲಂ ಜಿಲ್ಲೆಯ ಆತ್ತೂರು ಸಮೀಪದ ಸಾಗೋ ಕಾರ್ಖಾನೆಯೊಂದರಲ್ಲಿ ರಾಸಾಯನಿಕ ಅನಿಲ ಸೋರಿಕೆಯಾಗಿ 11 ಮಂದಿ ಕಾರ್ಮಿಕರು ಅಸ್ವಸ್ಥಗೊಂಡಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಅಸ್ವಸ್ಥರ ಆರೋಗ್ಯ ಸ್ಥಿತಿಯ ಮೇಲೆ ವೈದ್ಯರು ನಿಗಾ ವಹಿಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ತಲೈವಾಸಲ್ ಸಮೀಪದ ಸದಾಶಿವಪುರಂನಲ್ಲಿ ಧರ್ಮಲಿಂಗಂ ಎಂಬುವವರಿಗೆ ಸೇರಿದ ಸಾಗೋ ಕಾರ್ಖಾನೆಯಲ್ಲಿ ಆಗಸ್ಟ್ 2ರಂದು ಈ ಘಟನೆ ಸಂಭವಿಸಿದೆ. ಎರಡು ದಶಕಗಳಿಗೂ ಹೆಚ್ಚು ಕಾಲದಿಂದ ಕಾರ್ಯನಿರ್ವಹಿಸುತ್ತಿರುವ ಕಾರ್ಖಾನೆಯ ಒಂದು ಕೊಠಡಿಯಲ್ಲಿ ಸುಮಾರು 15 ಚೀಲ ಕ್ಲೋರಿನ್ ಪುಡಿ ಸಂಗ್ರಹಿಸಿಡಲಾಗಿತ್ತು.

ಘಟನೆ ನಡೆದ ಸಂದರ್ಭದಲ್ಲಿ ಕಾರ್ಖಾನೆಯ ಗೋದಾಮಿನಲ್ಲಿ 18 ಮಂದಿ ಕಾರ್ಮಿಕರು ಎಂದಿನಂತೆ ಕೆಲಸ ಮಾಡುತ್ತಿದ್ದರು. ಈ ವೇಳೆ ಏಕಾಏಕಿ ವಿದ್ಯುತ್ ಸಮಸ್ಯೆ ಉಂಟಾಗಿದ್ದು, ಕೊಠಡಿಯಲ್ಲಿ ಸಂಗ್ರಹಿಸಿಡಲಾಗಿದ್ದ ಕ್ಲೋರಿನ್ ಚೀಲಗಳಿಗೆ ಬೆಂಕಿ ಹೊತ್ತಿಕೊಂಡಿದೆ. ಪರಿಣಾಮ ವಿಷಕಾರಿ ಹೊಗೆ ಕೋಣೆಯಾದ್ಯಂತ ವ್ಯಾಪಿಸಿದೆ.

ಹೊಗೆಯಿಂದ ಉಸಿರಾಟಕ್ಕೆ ತೊಂದರೆ ಉಂಟಾದ ಹಿನ್ನೆಲೆಯಲ್ಲಿ ಕಾರ್ಮಿಕರು ತಕ್ಷಣ ಅಲ್ಲಿಂದ ಹೊರಗೆ ಓಡಿ ಬಂದಿದ್ದಾರೆ. ಆದರೆ, ರಾಸಾಯನಿಕ ಹೊಗೆಯನ್ನು ಸೇವಿಸಿದ ಪರಿಣಾಮ 11 ಮಂದಿ ಸ್ಥಳದಲ್ಲೇ ಪ್ರಜ್ಞೆ ತಪ್ಪಿ ಬಿದ್ದಿದ್ದಾರೆ. ಕೂಡಲೇ ಸಹ ಕಾರ್ಮಿಕರು ಅವರನ್ನು ರಕ್ಷಿಸಿ ಆತ್ತೂರಿನ ಖಾಸಗಿ ಆಸ್ಪತ್ರೆಗೆ ಕರೆದೊಯ್ದಿದ್ದಾರೆ.

ಅಸ್ವಸ್ಥಗೊಂಡಿರುವ ಎಲ್ಲ 11 ಮಂದಿಯನ್ನು ತೀವ್ರ ನಿಗಾ ಘಟಕಕ್ಕೆ ದಾಖಲಿಸಲಾಗಿದ್ದು, ವೈದ್ಯರು ಚಿಕಿತ್ಸೆ ಮುಂದುವರಿಸಿದ್ದಾರೆ. ಘಟನೆಯ ಕುರಿತು ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದು, ರಾಸಾಯನಿಕ ಸೋರಿಕೆಗೆ ನಿಖರ ಕಾರಣ ತಿಳಿಯಲು ತನಿಖೆ ಕೈಗೊಳ್ಳಲಾಗಿದೆ.

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆಯೇ ಅಗ್ನಿಶಾಮಕ ದಳ, ಪೊಲೀಸರು ಹಾಗೂ ಕಾರ್ಮಿಕ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಧಾವಿಸಿ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತಂದರು. ಕಾರ್ಖಾನೆಯ ಸುರಕ್ಷತಾ ಕ್ರಮಗಳು ಹಾಗೂ ರಾಸಾಯನಿಕ ಸಂಗ್ರಹದ ನಿಯಮಗಳನ್ನು ಪಾಲಿಸಲಾಗಿದೆಯೇ ಎಂಬ ಕುರಿತು ತನಿಖೆ ಆರಂಭಿಸಲಾಗಿದ್ದು, ವರದಿ ಬಂದ ಬಳಿಕ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಘಟನೆಯ ಬಳಿಕ ಅಗ್ನಿಶಾಮಕ ಹಾಗೂ ಪೊಲೀಸ್ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತಂದಿದ್ದು, ಕಾರ್ಖಾನೆಯ ಸುರಕ್ಷತಾ ಕ್ರಮಗಳ ಕುರಿತು ಅಧಿಕಾರಿಗಳು ಸಮಗ್ರ ಪರಿಶೀಲನೆ ನಡೆಸುತ್ತಿದ್ದಾರೆ.

# ಟೀಕಾಚಾರ್ಯರ ಮಧ್ಯಾರಾಧನಾ ಮಹೋತ್ಸವ

● ವಿಕ್ರಮ ವಾಹಿನಿ | ಕಲಬುರಗಿ

ಟೀಕಾಚಾರ್ಯರೆಂದೇ ಪ್ರಸಿದ್ಧರಾದ ಶ್ರೀ ಜಯತೀರ್ಥರ ಮಧ್ಯಾರಾಧನಾ ಮಹೋತ್ಸವವನ್ನು ಮಳಖೇಡದ ಮೂಲಬೃಂದಾವನ ಸನ್ನಿಧಾನದಲ್ಲಿ ಭಕ್ತಿಭಾವದಿಂದ ಆಚರಿಸಲಾಯಿತು. ಶ್ರೀಮದುತ್ತರಾದಿ ಮಠಾಧೀಶರಾದ ಪರಮಪೂಜ್ಯ ಶ್ರೀ ಸತ್ಯಾತ್ಮತೀರ್ಥ ಶ್ರೀಪಾದರು ಯರಗೋಳದಲ್ಲಿ ಪೂರ್ವಾರಾಧನೆ ನೆರವೇರಿಸಿ, ಬಳಿಕ ಮಳಖೇಡದಲ್ಲಿ ನಡೆದ ಮಧ್ಯಾರಾಧನಾ ಮಹೋತ್ಸವದ ಧಾರ್ಮಿಕ ಕಾರ್ಯಕ್ರಮಗಳಿಗೆ ನೇತೃತ್ವ ವಹಿಸಿದರು.

ಈ ಸಂದರ್ಭದಲ್ಲಿ ಶ್ರೀ ಜಯತೀರ್ಥರು ಶ್ರೀಮಧ್ವಾಚಾರ್ಯರ ಗ್ರಂಥಗಳಿಗೆ ಟೀಕೆಗಳನ್ನು ರಚಿಸಿದ ಗುಹಾ ಸನ್ನಿಧಾನದಲ್ಲಿ ವಿಶೇಷ ಪೂಜೆ, ಹಸ್ತೋದಕ ಹಾಗೂ ಶ್ರೀಮನ್ನ್ಯಾಯಸುಧಾ ಗ್ರಂಥ ಪಾರಾಯಣ ನಡೆಯಿತು. ವಿದ್ಯಾರ್ಥಿಗಳಿಂದ ಶಾಸ್ತ್ರಾನುವಾದ, ಸಂಸ್ಥಾನ ಪೂಜೆ, ಶ್ರೀ ಜಯತೀರ್ಥರ ಮೂಲಬೃಂದಾವನಕ್ಕೆ ಪಂಚಾಮೃತ ಅಭಿಷೇಕ ಹಾಗೂ ಹಸ್ತೋದಕ ಸಮರ್ಪಣೆ ನೆರವೇರಿತು. ತಿರುಮಲ ಶ್ರೀ ಶ್ರೀನಿವಾಸದೇವರ ಶೇಷವಸ್ತ್ರವನ್ನು ಶ್ರೀ ಸತ್ಯಾತ್ಮತೀರ್ಥ ಶ್ರೀಗಳು ಮೂಲಬೃಂದಾವನಕ್ಕೆ ಸಮರ್ಪಿಸಿದರು.

ಮಳಖೇಡದಲ್ಲಿ ನಡೆದ ವಿದ್ವತ್ ಸಭೆಯಲ್ಲಿ ಕರ್ನಾಟಕ, ಆಂಧ್ರಪ್ರದೇಶ, ಮಹಾರಾಷ್ಟ್ರ, ತೆಲಂಗಾಣ ಹಾಗೂ ತಮಿಳುನಾಡಿನ ವಿದ್ವಾಂಸರು ಭಾಗವಹಿಸಿ ವಿವಿಧ ತತ್ವಶಾಸ್ತ್ರಗಳ ಕುರಿತು ಉಪನ್ಯಾಸ ನೀಡಿದರು. ಇದೇ ಸಂದರ್ಭದಲ್ಲಿ ಮುಂಬೈನ ಶ್ರೀ ಸತ್ಯಧ್ಯಾನ ವಿದ್ಯಾಪೀಠದ ಕುಲಪತಿ ಪಂ. ವಿದ್ಯಾಸಿಂಹಾಚಾರ್ಯ



ಮಾಹುಲಿ ಅವರು ಕನ್ನಡಕ್ಕೆ ಅನುವಾದಿಸಿದ 'ಶ್ರೀ ಜಯತೀರ್ಥರ ಭಗವದ್ಗೀತಾಭಾಷ್ಯ ಪ್ರಮೇಯ ದೀಪಿಕಾ' ಗ್ರಂಥವನ್ನು ಶ್ರೀ ಸತ್ಯಾತ್ಮತೀರ್ಥ ಶ್ರೀಪಾದರು ಲೋಕಾರ್ಪಣೆ ಮಾಡಿದರು.


ಕಾರ್ಯಕ್ರಮದಲ್ಲಿ ಪಂ. ಮಧ್ವಾಚಾರ್ಯ ಮೊಕಾಶಿ, ಪಂ. ವಿದ್ಯಾಧೀಶಾಚಾರ್ಯ ಗುತ್ತಲ, ಪಂ. ಶಶಿಧರ ಆಚಾರ್ಯ, ಪಂ. ಪಾಂಡುರಂಗಾಚಾರ್ಯ ರೊಟ್ಟಿ, ಪಂ. ಗುರುಮಧ್ವಾಚಾರ್ಯ ನವಲಿ, ಪಂ. ಘಂಟಿ ರಾಮಾಚಾರ್ಯ, ಪಂ. ವೆಂಕಣ್ಣಾಚಾರ್ಯ ಪೂಜಾರ್,



**ರಾಯಚೂರಿನ ಶ್ರೀಕ್ಷೇತ್ರ ನವಬೃಂದಾವನ ಗಡ್ಡೆಯಲ್ಲಿ ಶ್ರೀ ಜಯತೀರ್ಥರ ಮಧ್ಯಾರಾಧನೆ ಅಂಗವಾಗಿ ಮೂಲ ಬೃಂದಾವನದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸ್ವಾಮೀಜಿಯವರು ವಿಶೇಷ ಪೂಜೆ ಸಲ್ಲಿಸಿ, ಮಹಾಮಂಗಳಾರತಿ ನೆರವೇರಿಸಿ ಭಕ್ತರಿಗೆ ಫಲಮಂತ್ರಾಕ್ಷತೆ ವಿತರಿಸಿ ಆಶೀರ್ವದಿಸಿದರು.**

ಸುಧೀಂಧ್ರಾಚಾರ್ಯ ಗದ್ದನಕೇರಿ, ಕೃಷ್ಣಾಚಾರ್ಯ ಉಪಾಧ್ಯ ಸೇರಿದಂತೆ ಅನೇಕ ವಿದ್ವಾಂಸರು ಹಾಗೂ ಭಕ್ತರು ಉಪಸ್ಥಿತರಿದ್ದರು.

# ಮಧುರೈ ಬಳಿ ಭೀಕರ ರಸ್ತೆ ಅಪಘಾತ: ಮಗು ಸೇರಿದಂತೆ ಐವರ ಸಾವು



● ವಿಕ್ರಮ ವಾಹಿನಿ | ಮಧುರೈ (ತಮಿಳುನಾಡು)

ಮಧುರೈ ಜಿಲ್ಲೆಯ ಮೇಲೂರು ಸಮೀಪ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಎರಡು ವರ್ಷದ ಹೆಣ್ಣು ಮಗು ಸೇರಿದಂತೆ ಒಂದೇ ಕುಟುಂಬದ ಐವರು ಮೃತಪಟ್ಟಿದ್ದು, ಮತ್ತೊಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಮೃತರನ್ನು ಚೆನ್ನೈನ ವಡಿಪಕ್ಕಂ ನಿವಾಸಿಗಳಾದ ಶ್ರೀರಾಮ್ (32), ಅವರ ಪತ್ನಿ ರಂಜನ್ (30), ಪುತ್ರಿ ಕೃತಿಕಾ (2), ಕಿರಿಯ ಸಹೋದರ ಬಾಲಾಜಿ (28) ಹಾಗೂ ತಾಯಿ ರಾಜಕುಮಾರಿ (52) ಎಂದು ಗುರುತಿಸಲಾಗಿದೆ.

ಆಗಸ್ಟ್ 3ರಂದು ಮುಂಜಾನೆ ಈ ಅಪಘಾತ ಸಂಭವಿಸಿದೆ. ಚೆನ್ನೈನಿಂದ ತಿರುನಲ್ವೇಲಿ ಕಡೆಗೆ ತೆರಳುತ್ತಿದ್ದ ಕಾರಿನಲ್ಲಿ ಮೂವರು ಪುರುಷರು, ಇಬ್ಬರು ಮಹಿಳೆಯರು ಮತ್ತು ಒಂದು ಮಗು ಪ್ರಯಾಣಿಸುತ್ತಿದ್ದರು. ತುಂಬೈಪಟ್ಟಿ ಚತುಷ್ಪಥ ಹೆದ್ದಾರಿಯ ಮೇಲ್ಸೇತುವೆ ಬಳಿ ಸಾಗುತ್ತಿದ್ದಾಗ, ಕಾರು ಮುಂದೆ ಚಲಿಸುತ್ತಿದ್ದ ದ್ವಿಚಕ್ರ ವಾಹನಕ್ಕೆ ಡಿಕ್ಕಿ ಹೊಡೆದಿದೆ. ಪರಿಣಾಮ ಚಾಲಕನ ನಿಯಂತ್ರಣ ತಪ್ಪಿದ ಕಾರು ರಸ್ತೆ ವಿಭಜಕ ದಾಟಿ ಎದುರು ಬದಿಗೆ ತೆರಳಿ, ಮಧುರೈನಿಂದ ತಿರುಚಿ ಕಡೆಗೆ ಸಾಗುತ್ತಿದ್ದ ಮತ್ತೊಂದು ಕಾರಿಗೆ ಭೀಕರವಾಗಿ ಡಿಕ್ಕಿ ಹೊಡೆದಿದೆ.

ಡಿಕ್ಕಿಯ ರಭಸಕ್ಕೆ ಚೆನ್ನೈನಿಂದ ತಿರುನಲ್ವೇಲಿಗೆ ತೆರಳುತ್ತಿದ್ದ ಕಾರು ಸಂಪೂರ್ಣವಾಗಿ ನಜ್ಜುಗುಜ್ಜಾಗಿದ್ದು, ಅದರಲ್ಲಿದ್ದ ಐವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಮತ್ತೊಂದು ಕಾರಿನಲ್ಲಿದ್ದ ಓರ್ವ ಪ್ರಯಾಣಿಕನಿಗೂ ಗಾಯಗಳಾಗಿದ್ದು, ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಮೇಲೂರು ಪೊಲೀಸರು ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆ ನಡೆಸಿ, ಮೃತದೇಹಗಳನ್ನು ಹೊರತೆಗೆದು ಮರಣೋತ್ತರ ಪರೀಕ್ಷೆಗಾಗಿ ಮೇಲೂರು ಸರ್ಕಾರಿ ಆಸ್ಪತ್ರೆಗೆ ಕಳುಹಿಸಿದ್ದಾರೆ. ಅಪಘಾತದಿಂದ ಹೆದ್ದಾರಿಯಲ್ಲಿ ಕೆಲಕಾಲ ಸಂಚಾರ ಅಸ್ತವ್ಯಸ್ತಗೊಂಡಿತ್ತು. ಪೊಲೀಸರು ಪ್ರಕರಣ ದಾಖಲಿಸಿಕೊಂಡು ಅಪಘಾತದ ನಿಖರ ಕಾರಣದ ಕುರಿತು ತನಿಖೆ ಮುಂದುವರಿಸಿದ್ದಾರೆ.


# ಕಾವೇರಿ ವಿವಾದ: ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ ತಮಿಳುನಾಡು

● ವಿಕ್ರಮ ವಾಹಿನಿ | ಚೆನ್ನೈ/ಬೆಂಗಳೂರು

ಕಾವೇರಿ ನೀರು ಹಂಚಿಕೆ ವಿವಾದ ಮತ್ತೆ ತೀವ್ರಗೊಂಡಿದ್ದು, ಕಾವೇರಿ ಜಲ ನಿರ್ವಹಣಾ ಪ್ರಾಧಿಕಾರ (ಅಫಒಂ) ಹಾಗೂ ಕಾವೇರಿ ನೀರು ನಿಯಂತ್ರಣ ಸಮಿತಿ (ಅಫಖಅ) ಆದೇಶಗಳನ್ನು ಕರ್ನಾಟಕ ಸರ್ಕಾರ ಪಾಲಿಸಿಲ್ಲ ಎಂದು ಆರೋಪಿಸಿ ತಮಿಳುನಾಡು ಸರ್ಕಾರ ಸೋಮವಾರ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದೆ.

ಸರ್ಕಾರದ ಅಧಿಕೃತ ಪ್ರಕಟಣೆಯ ಪ್ರಕಾರ, ಜುಲೈ 28ರಂದು ನಡೆದ ಸಿಡಬ್ಲ್ಯುಆರ್‌ಸಿ 139ನೇ ಸಭೆಯಲ್ಲಿ ಜುಲೈ 29ರಿಂದ ಆಗಸ್ಟ್ 12ರವರೆಗೆ ಕೆಆರ್‌ಎಸ್ ಹಾಗೂ ಕಬಿನಿ ಜಲಾಶಯಗಳಿಂದ ಬಿಳಿಗುಂಡ್ಲುವಿಗೆ ಪ್ರತಿದಿನ 3,500 ಕ್ಯೂಸೆಕ್ ನೀರು ಬಿಡುಗಡೆ ಮಾಡುವಂತೆ ಕರ್ನಾಟಕಕ್ಕೆ ನಿರ್ದೇಶನ ನೀಡಲಾಗಿತ್ತು. ಈ ನಿರ್ಧಾರಕ್ಕೆ ಜುಲೈ 30ರಂದು ನಡೆದ ಸಿಡಬ್ಲ್ಯುಎಂಎ ತುರ್ತು ಸಭೆಯಲ್ಲೂ ಅನುಮೋದನೆ ದೊರೆತಿತ್ತು.

ಆದರೆ ಜುಲೈ 29ರಿಂದ ಆಗಸ್ಟ್ 2ರವರೆಗೆ



ಬಿಳಿಗುಂಡ್ಲುವಿಗೆ ಹರಿದು ಬಂದ ನೀರಿನ ಪ್ರಮಾಣ ಕೇವಲ 158ರಿಂದ 550 ಕ್ಯೂಸೆಕ್‌ಗಳಷ್ಟೇ ಇದ್ದು, ಇದು ನಿರ್ದೇಶಿತ ಪ್ರಮಾಣಕ್ಕಿಂತ ಬಹಳ ಕಡಿಮೆಯಾಗಿದೆ ಎಂದು ತಮಿಳುನಾಡು ಅರ್ಜಿಯಲ್ಲಿ ಉಲ್ಲೇಖಿಸಿದೆ.

ಕರ್ನಾಟಕದ ಪ್ರಮುಖ ಜಲಾಶಯಗಳಲ್ಲಿ ಸಾಕಷ್ಟು ನೀರು ಲಭ್ಯವಿದ್ದು, ಆಗಸ್ಟ್ 3ರ ವೇಳೆಗೆ ಕೆಆರ್‌ಎಸ್‌ನಲ್ಲಿ 23.078 ಟಿಎಂಸಿ, ಕಬಿನಿಯಲ್ಲಿ 18.610 ಟಿಎಂಸಿ, ಹೇಮಾವತಿಯಲ್ಲಿ 28.022 ಟಿಎಂಸಿ ಹಾಗೂ ಹಾರಂಗಿಯಲ್ಲಿ 7.827 ಟಿಎಂಸಿ ಸೇರಿ ಒಟ್ಟು 77.537 ಟಿಎಂಸಿ ನೀರು ಸಂಗ್ರಹವಾಗಿದೆ ಎಂದು ತಮಿಳುನಾಡು ವಾದಿಸಿದೆ. ಇದರಲ್ಲಿ 67.517 ಟಿಎಂಸಿ ಬಳಸಬಹುದಾದ ನೀರಿದೆ ಎಂದು ಅರ್ಜಿಯಲ್ಲಿ ತಿಳಿಸಲಾಗಿದೆ.

ಕಬಿನಿ ಹಾಗೂ ಕೆಆರ್‌ಎಸ್ ಜಲಾನಯನ ಪ್ರದೇಶಗಳಲ್ಲಿ ಉತ್ತಮ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ, ಪ್ರಸ್ತುತ ಅವಧಿಯಲ್ಲಿ ತಮಿಳುನಾಡಿಗೆ ಅನುಪಾತದ ಆಧಾರದ ಮೇಲೆ 26.954 ಟಿಎಂಸಿ ನೀರು ದೊರಕಬೇಕಿದ್ದು, ವಿಳಂಬವಿಲ್ಲದೆ ತನ್ನ ಪಾಲಿನ ನೀರನ್ನು ಬಿಡುಗಡೆ ಮಾಡುವಂತೆ ಕರ್ನಾಟಕಕ್ಕೆ ನಿರ್ದೇಶನ ನೀಡಬೇಕೆಂದು ಸುಪ್ರೀಂ ಕೋರ್ಟ್‌ಗೆ ಮನವಿ ಮಾಡಿದೆ.

ಇತ್ತ, ಕಾವೇರಿ ಜಲಾನಯನ ಪ್ರದೇಶದಲ್ಲಿ ನಿರಂತರ ಮಳೆಯಾಗುತ್ತಿರುವ ಪರಿಣಾಮ ಕಬಿನಿ ಜಲಾಶಯ ಬಹುತೇಕ ಭರ್ತಿಯಾಗಿದೆ. ಸುರಕ್ಷತಾ ಕ್ರಮವಾಗಿ ನಾಲ್ಕು ಕ್ರಸ್ಟ್ ಗೇಟ್‌ಗಳ ಮೂಲಕ ಸುಮಾರು 10 ಸಾವಿರ ಕ್ಯೂಸೆಕ್ ನೀರನ್ನು ನದಿಗೆ ಹರಿಸಲಾಗುತ್ತಿದ್ದು, ಈ ನೀರು ಕಪಿಲಾ ನದಿಯ ಮೂಲಕ ತಮಿಳುನಾಡಿನತ್ತ ಹರಿಯುತ್ತಿದೆ.

# ಅತಿವೃಷ್ಟಿ-ಅನಾವೃಷ್ಟಿ ಪರಿಶೀಲನೆಗೆ ಸಚಿವರಿಗೆ ಸಿಎಂ ಸೂಚನೆ

● ವಿಕ್ರಮ ವಾಹಿನಿ | ಬೆಂಗಳೂರು

ಅತಿವೃಷ್ಟಿ ಹಾಗೂ ಅನಾವೃಷ್ಟಿ ಪರಿಸ್ಥಿತಿಯನ್ನು ಪರಿಶೀಲಿಸಲು ನೂತನ ಸಚಿವರು ಬುಧವಾರದಿಂದ ತಮಗೆ ಜವಾಬ್ದಾರಿ ನೀಡಲಾದ ಜಿಲ್ಲೆಗಳಿಗೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿ ಕಂದಾಯ ಸಚಿವರಿಗೆ ವರದಿ ಸಲ್ಲಿಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೂಚನೆ ನೀಡಿದರು.


ಸೋಮವಾರ ವಿಧಾನಸೌಧದಲ್ಲಿ ನಡೆದ ಸಚಿವ ಸಂಪುಟ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಎದುರಿಸುತ್ತಿರುವ ಬರ, ಅತಿವೃಷ್ಟಿ ಹಾಗೂ ಕಾವೇರಿ ನೀರಿನ ಸಮಸ್ಯೆಗಳ ಕುರಿತು ಸಂಪುಟದಲ್ಲಿ ಸಮಗ್ರ ಚರ್ಚೆ ನಡೆಸಲಾಗಿದೆ ಎಂದರು. ಮಳೆಯಿಂದಾಗಿ ಪರಿಸ್ಥಿತಿ ತಾತ್ಕಾಲಿಕವಾಗಿ ಸುಧಾರಿಸಿದ್ದರೂ, ಕೆಲ ಜಿಲ್ಲೆಗಳಲ್ಲಿ ಹಾನಿ ಸಂಭವಿಸಿದ್ದು, ಅಗತ್ಯ ಪರಿಹಾರ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

**ಜಿಲ್ಲಾ ಪ್ರವಾಸಕ್ಕೆ ಸಚಿವರಿಗೆ ನಿರ್ದೇಶನ**

ಪ್ರತಿ ಸಚಿವರು ತಮಗೆ ಹಂಚಿಕೆಯಾಗುವ ಜಿಲ್ಲೆಗಳಿಗೆ ಭೇಟಿ ನೀಡಿ ಅತಿವೃಷ್ಟಿ ಮತ್ತು ಅನಾವೃಷ್ಟಿ ಪರಿಸ್ಥಿತಿಯನ್ನು ಸ್ಥಳದಲ್ಲೇ ಪರಿಶೀಲಿಸಬೇಕು. ಪರಿಶೀಲನೆ ವೇಳೆ ಎಲ್ಲಾ ಪಕ್ಷಗಳ ಜನಪ್ರತಿನಿಧಿಗಳನ್ನು ಜೊತೆಗೆ ಕರೆದುಕೊಂಡು ಹೋಗುವಂತೆ ಸೂಚಿಸಲಾಗಿದೆ ಎಂದು ಸಿಎಂ ತಿಳಿಸಿದರು.

**ಹೊಸ ಮುಖಗಳಿಗೆ ಆದ್ಯತೆ**

ಈ ಬಾರಿ ಸಚಿವ ಸಂಪುಟ ವಿಸ್ತರಣೆಯಲ್ಲಿ ಹೊಸ ಮುಖಗಳಿಗೆ ಅವಕಾಶ ನೀಡಲಾಗಿದೆ. ಸಚಿವ ಸ್ಥಾನ ಸಿಗದವರಿಗೆ ತಾಳ್ಮೆ ಅಗತ್ಯವಾಗಿದ್ದು, ಸೂಕ್ತ ಸಮಯದಲ್ಲಿ ಎಲ್ಲರಿಗೂ ಅವಕಾಶ ಕಲ್ಪಿಸಲಾಗುವುದು ಎಂದು ಹೇಳಿದರು. ತಾವು ಹಾಗೂ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಕೂಡ ರಾಜಕೀಯ ಜೀವನದಲ್ಲಿ ತಾಳ್ಮೆಯಿಂದಲೇ ಈ ಹಂತ ತಲುಪಿದ್ದೇವೆ ಎಂದು ನೆನಪಿಸಿದರು.



**ಮಹಿಳೆಯರಿಗೆ ಅವಕಾಶ ಖಚಿತ**

ಸಚಿವ ಸಂಪುಟದಲ್ಲಿ ಮಹಿಳೆಯರಿಗೆ ಸ್ಥಾನ ಸಿಗದಿರುವ ಕುರಿತು ಪ್ರತಿಕ್ರಿಯಿಸಿದ ಸಿಎಂ, ಕಾಂಗ್ರೆಸ್ ಮಹಿಳೆಯರಿಗೆ ಆದ್ಯತೆ ನೀಡುವ ಪಕ್ಷವಾಗಿದ್ದು, ಮುಂದಿನ ದಿನಗಳಲ್ಲಿ ಸಚಿವ ಸಂಪುಟದಲ್ಲೂ ಮಹಿಳೆಯರಿಗೆ ಅವಕಾಶ ನೀಡಲಾಗುವುದು ಎಂದು ಭರವಸೆ ನೀಡಿದರು.

**ಸಿದ್ದರಾಮಯ್ಯ ಅಸಮಾಧಾನದಲ್ಲಿಲ್ಲ**

ಸಚಿವ ಸಂಪುಟ ವಿಸ್ತರಣೆಗೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಗೈರಾಗಿರುವ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಸಂಪುಟ ವಿಸ್ತರಣೆ ಕುರಿತ ಎಲ್ಲ ನಿರ್ಧಾರಗಳನ್ನು ಸಿದ್ದರಾಮಯ್ಯ ಅವರೊಂದಿಗೆ ಚರ್ಚಿಸಿ ಕೈಗೊಂಡಿದ್ದೇವೆ. ಅವರು ಯಾವುದೇ ಅಸಮಾಧಾನದಲ್ಲಿಲ್ಲ. ಕಾಂಗ್ರೆಸ್‌ನ 139 ಶಾಸಕರು ಒಂದೇ ತಂಡವಾಗಿ ಕೆಲಸ ಮಾಡುತ್ತಿದ್ದಾರೆ ಎಂದು ಸ್ಪಷ್ಟಪಡಿಸಿದರು.

**ತಮಿಳುನಾಡಿನ ಅರ್ಜಿಗೆ ಕಾನೂನು ಹೋರಾಟ**

ಕಾವೇರಿ ನೀರು ಬಿಡುಗಡೆ ವಿಚಾರವಾಗಿ ತಮಿಳುನಾಡು ಸುಪ್ರೀಂ ಕೋರ್ಟ್ ಮೆಟ್ಟಿಲೇರಿರುವ ಕುರಿತು ಪ್ರತಿಕ್ರಿಯಿಸಿದ ಸಿಎಂ, ರಾಜ್ಯ ಸರ್ಕಾರ ಕಾನೂನು ತಜ್ಞರೊಂದಿಗೆ ಸಮಾಲೋಚಿಸಿ ನ್ಯಾಯಾಲಯದಲ್ಲಿ ಸೂಕ್ತ ಉತ್ತರ ನೀಡಲಿದೆ ಎಂದರು. ಕಾವೇರಿ ವಿಚಾರದಲ್ಲಿ ಕರ್ನಾಟಕದ ಹಿತಾಸಕ್ತಿಯನ್ನು ಕಾನೂನು ಚೌಕಟ್ಟಿನಲ್ಲೇ ಸಮರ್ಥವಾಗಿ ರಕ್ಷಿಸಲಾಗುವುದು ಎಂದು ಹೇಳಿದರು.

# 'ಸಿಎಂ ಕರೆದಿದ್ದರಿಂದ ಬಂದಿದ್ದೇನೆ'

● ವಿಕ್ರಮ ವಾಹಿನಿ | ಬೆಂಗಳೂರು

ರಾಜ್ಯ ಸಚಿವ ಸಂಪುಟ ವಿಸ್ತರಣೆ ವೇಳೆ ಕೊನೆಯ ಕ್ಷಣದಲ್ಲಿ ಸಚಿವರ ಪಟ್ಟಿಯಲ್ಲಿ ನಡೆದ ಬದಲಾವಣೆ ರಾಜಕೀಯ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿರುವ ನಡುವೆಯೇ ನೂತನ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ತಮ್ಮ ಪ್ರತಿಕ್ರಿಯೆ ನೀಡಿದ್ದಾರೆ.

ಸಚಿವ ಸ್ಥಾನಕ್ಕೆ ತಮ್ಮ ಹೆಸರನ್ನು ಅಂತಿಮಗೊಳಿಸಿದ ಬಗ್ಗೆ ಯಾವುದೇ ಪೂರ್ವ ಮಾಹಿತಿ ಇರಲಿಲ್ಲ. ಮುಖ್ಯಮಂತ್ರಿ ಕರೆ ನೀಡಿದ್ದರಿಂದ ಪ್ರಮಾಣವಚನ ಸ್ವೀಕರಿಸಲು ಬಂದಿದ್ದೇನೆ ಎಂದು ಅವರು ಸ್ಪಷ್ಟಪಡಿಸಿದರು.



ಸಚಿವ ಸ್ಥಾನಕ್ಕಾಗಿ ತಾವು ಯಾವುದೇ ರೀತಿಯ ಒತ್ತಡ, ರಾಜೀನಾಮೆ ಬೆದರಿಕೆ ಅಥವಾ ಬೇಡಿಕೆ ಇಟ್ಟಿಲ್ಲ ಎಂದು ಹೇಳಿದ ಅವರು, ಈ ಕುರಿತು ತಮ್ಮೊಂದಿಗೆ ಯಾವುದೇ ಚರ್ಚೆಯೂ ನಡೆದಿಲ್ಲ ಎಂದರು. ಜಿಲ್ಲಾ ಹಾಗೂ ಸಾಮಾಜಿಕ ಸಮೀಕರಣವನ್ನು ಪರಿಗಣಿಸಿ ಪಕ್ಷದ ನಾಯಕತ್ವ ಅವಕಾಶ ನೀಡಿದೆ. ಕಾಂಗ್ರೆಸ್ ಸರ್ಕಾರದಲ್ಲಿ ಎಲ್ಲ ಸಮುದಾಯಗಳಿಗೆ ಸಮರ್ಪಕ ಪ್ರಾತಿನಿಧ್ಯ ಕಲ್ಪಿಸುವ ಪ್ರಯತ್ನ ನಡೆಯುತ್ತಿದೆ ಎಂದು ಅವರು ಅಭಿಪ್ರಾಯಪಟ್ಟರು.

ಸಚಿವರ ಪಟ್ಟಿಯಲ್ಲಿ ಕೊನೆಯ ಕ್ಷಣದಲ್ಲಿ ನಡೆದ ಬದಲಾವಣೆಗಳ ಬಗ್ಗೆ ಸಂಪೂರ್ಣ ಮಾಹಿತಿ ಇಲ್ಲ. ಪಕ್ಷದೊಳಗಿನ ಯಾವುದೇ ಅಸಮಾಧಾನ ಅಥವಾ ಗೊಂದಲಗಳಿದ್ದರೆ ಮುಖ್ಯಮಂತ್ರಿ ಹಾಗೂ ಹಿರಿಯ ನಾಯಕರು ಅದನ್ನು ಬಗೆಹರಿಸಲಿದ್ದಾರೆ ಎಂಬ ವಿಶ್ವಾಸ ವ್ಯಕ್ತಪಡಿಸಿದ ಮಲ್ಲಿಕಾರ್ಜುನ್, ಪಕ್ಷದ ನಿರ್ಧಾರಕ್ಕೆ ಬದ್ಧವಾಗಿ ಸರ್ಕಾರದ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸುವುದಾಗಿ ಹೇಳಿದರು.

Vikrama Vahini Kannada Daily, #204, Forest Layout, Jnanabharathi, Bangalore-560095
vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 130,